ದಾನ ಮಾಡಿರಿ,
ಆದರೆ ಅದರಿಂದ
ಪ್ರತಿಫಲ
ನಿರೀಕ್ಷಿಸಬೇಡಿ.
ಅದು ತಾನಾಗಿಯೇ
ವಾಪಸ್ ಬರಲಿದೆ
–ಸ್ವಾಮಿ ವಿವೇಕಾನಂದ

# ಬೀದರವಾಣಿ

ಬೀದರ ಜಿಲ್ಲೆಯ ನಿರ್ಭಯ, ನಿಷ್ಪಕ್ಷಪಾತ ಏಕೈಕ ಅಂತರಜಾಲ(Online)

ಸಂಪಾದಕರು:ಸಿದ್ರಾಮಯ್ಯ ಸ್ವಾಮಿ EDITOR:SIDRAMAYYA SWAMY

ನೋಟ ಎಂದು ನೀ
ಮುಂದಿಟ್ಟ ಹೆಜ್ಜೆ
ಹಿಂದಿಡಬೇಡ...
ಏಕೆಂದರೆ...
ಯಾರಿಗೆ ಗೊತ್ತು ಆ ಹೆಜ್ಜೆ
ನಿನ್ನ ಇತಿಹಾಸವನೇ ಸೃಷ್ಟಿ
ಮಾಡುವ
ಹೆಜ್ಜೆಯಾಗಿರಬಹುದು...

bidarvani.com ಇ-ಪೇಪರ್bidarvani.online bidarvani bidarvani@gmail.com Whatsapp Contact:9148471077

KARKAN/77693/2019 ಸಂಪುಟ:08 ಸಂಚಿಕೆ:204 ದಿನಾಂಕ:13.11.2025 ಗುರುವಾರ ಪುಟ.4 ಬೆಲೆ:02 ರೂ ಮೊ.9945793175

## ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ 150ನೇ ಜನ್ಮದಿನ ಅಂಗವಾಗಿ ಏಕತಾ ನಡಿಗೆ- ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ




ಬೀದರ,ನ.12:ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ 150ನೇ ಜನ್ಮದಿನಾಚರಣೆ ಪೂರ್ಣಗೊಂಡ ಹಿನ್ನೆಲೆಯಲ್ಲಿ ಜಿಲ್ಲೆಯಲ್ಲಿ ವಿವಿಧ ಕಾರ್ಯಕ್ರಮಗಳನ್ನು ಹಾಕಿಕೊಳ್ಳಲಾಗಿದೆ. ಅದರಂತೆ ಇದೇ ನವೆಂಬರ್. 14 ಮತ್ತು 15 ರಂದು ಏಕತಾ ನಡಿಗೆ ( ಯುನಿಟಿ ಮಾರ್ಚ್ ) ಎಂಬ ಕಾರ್ಯಕ್ರಮವನ್ನು ಕೇಂದ್ರ ಸರ್ಕಾರದ ಕ್ರೀಡಾ ಮತ್ತು ಯುವ ಸಬಲೀಕರಣ ಮಂತ್ರಾಲಯದ ಮೇರಾ ಯುವ ಭಾರತ್ ಬೀದರ ಅವರ ಸಂಯೋಗದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ಹೇಳಿದರು.

ಅವರು ಬುಧವಾರ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಡೆದ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದರು. ನವೆಂಬರ್.14 ರಂದು ಬೆಳಿಗ್ಗೆ 8 ಗಂಟೆಗೆ ಭೂಮರೆಡ್ಡಿ ಕಾಲೇಜುನಿಂದ ಮೈಲೂರ ಕ್ರಾಸ್, ಬೊಮಗೊಂಡೇಶ್ವರ ವೃತ್ತ, ಬಸವೇಶ್ವರ ವೃತ್ತ ಭಗತ್ ಸಿಂಗ್ ವೃತ್ತ, ಹರಳಯ್ಯ ವೃತ್ತ, ಗುದುಗೆ ಆಸ್ಪತ್ರೆಯಿಂದ ನೆಹರು ಕ್ರೀಡಾಂಗಣದ ವರೆಗೆ ನಡಿಗೆ ನಡೆಯಲಿದ್ದು,

ನಂತರ 10 ಗಂಟೆಗೆ ನೆಹರು ಕ್ರೀಡಾಂಗಣದಲ್ಲಿ ಮುಖ್ಯ ಕಾರ್ಯಕ್ರಮ ನಡೆಯಲಿದೆ ಹಾಗೂ ನವೆಂಬರ್.15 ರಂದು ಬರಿದ್ ಶಾಹಿ ಮೈದಾನದಿಂದ ಕೇಂದ್ರ ಬಸ್ ನಿಲ್ದಾಣ, ಮಡಿವಾಳ ವೃತ್ತ, ರೋಟರಿ ವೃತ್ತ, ಬ್ರೀಮ್ಸ್ ಆಸ್ಪತ್ರೆ, ಅಂಬೇಡ್ಕರ್ ವೃತ್ತ, ಶಿವಾಜಿ ವೃತ್ತ, ಗುದಗೆ ಆಸ್ಪತ್ರೆಯಿಂದ ರಂಗಮಂದಿರದವರೆಗೆ ನಡಿಗೆ ಹಾಗೂ ಪೂಜ್ಯ ಚನ್ನಬಸವ ಪಟ್ಟದೇವರು ರಂಗಮಂದಿರದಲ್ಲಿ ಮುಖ್ಯ ಕಾರ್ಯಕ್ರಮ ನಡೆಯಲಿರುವುದರಿಂದ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದರು.

ಪ್ರವಾಹ ಕಾಮಗಾರಿ: ಪ್ರವಾಹದಿಂದ ಹಾನಿಗೊಳಗಾದ ರಸ್ತೆ, ಸೇತುವೆಗಳು ಮರು ಸಂಪರ್ಕಗೊಂಡಿವೆ. ಜನರಿಗೆ ಸಾರಿಗೆ ಸಂಪರ್ಕದಲ್ಲಿ ಯಾವುದೇ ರೀತಿಯ ತೊಂದರೆಯಾಗುತ್ತಿಲ್ಲ. ಬೆಳೆ ಹಾನಿಯಾದ 96510 ರೈತರ ಖಾತೆಗೆ 69 ಕೋಟಿ ರೂಪಾಯಿ ಈಗಾಗಲೇ ವರ್ಗಾಯಿಸಲಾಗಿದೆ ಹಾಗೂ ಉಳಿದ ಹಣವನ್ನು ನಾಲ್ಕೈದು ದಿನಗಳಲ್ಲಿ ರೈತರ ಖಾತೆಗೆ ಜಮಾ ಆಗಲಿದೆ.

ಕಬ್ಬು ದರ ನಿಗಧಿ: ಪ್ರತಿ ಟನ್ ಕಬ್ಬಿಗೆ ಚೇತರಿಕೆ ದರದಂತೆ 2750 ರೂ. ಹಾಗೂ ರಾಜ್ಯ ಸರ್ಕಾರದಿಂದ 50 ರೂ. ಮತ್ತು ಸಕ್ಕರೆ ಕಾರ್ಖಾನೆಯಿಂದ 50 ರೂ. ಹೆಚ್ಚುವರಿಯಾಗಿ ಸೇರಿಸಿ 2850 ರೂ ನೀಡುವ ಬಗ್ಗೆ ರೈತ ಮುಖಂಡರ ಜೊತೆ ಚರ್ಚಿಸಲಾಗಿದೆ. ರೈತ ಮುಖಂಡರ ಜೊತೆ ಒಮ್ಮತದ ನಿರ್ಧಾರ ಇನ್ನೂ ಮೂಡಿಬಂದಿಲ್ಲ. ಬೆಳಗಾವಿ ದರ 3200 ನೀಡುವಂತೆ ರೈತರ ಬೇಡಿಕೆ ಇಟ್ಟಿದ್ದಾರೆ. ಆದರೆ ಬೆಳಗಾವಿ ಕಬ್ಬಿನ ಚೇತರಿಗೆ ದರ ಅತೀ ಹೆಚ್ಚಾಗಿದ್ದು ಬೀದರನ ರಿಕವರಿ ದರ ತೀರ ಕಡಿಮೆಯಾಗಿರುವ ಹಿನ್ನೆಲೆ ಕಾರ್ಖಾನೆಗಳು ಬೆಳಗಾವಿ ದರಕ್ಕೆ ಒಪ್ಪುತ್ತಿಲ್ಲ. ಶೀಘ್ರವೇ ರೈತ ಮುಖಂಡರ ಜೊತೆಗೆ ಚರ್ಚಿಸಿ ಒಮ್ಮತದ ನಿರ್ಧಾರ ಕೈಗೊಳ್ಳಲಾಗುವುದೆಂದು ಜಿಲ್ಲಾಧಿಕಾರಿಗಳು ಹೇಳಿದರು.

ಇದೇ ಸಂದರ್ಭದಲ್ಲಿ ನಡಿಗೆಗೆ ಸಂಬಂಧಿಸಿದ ಪೋಸ್ಟರ್ ಬಿಡುಗಡೆ ಮಾಡಲಾಯಿತು.

ಈ ಸಂದರ್ಭದಲ್ಲಿ ಮೇರಾ ಯುವ ಭಾರತ್ ಜಿಲ್ಲಾ ಯುವ ಅಧಿಕಾರಿ ಮಯೂರ ಕುವಾರ್ ಗೋರ್ವೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ ಮಂಜುನಾಥ ಸುಳ್ಳೊಳ್ಳಿ, ಶಿವಕುಮಾರ ಸ್ವಾಮಿ, ಚನ್ನಬಸವಣ್ಣಾ ಬಳತೆ, ರವೀಂದ್ರ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ವಿದ್ಯಾರ್ಥಿ, ಉಪನ್ಯಾಸಕರ ಉಚಿತ ಆರೋಗ್ಯ ತಪಾಸಣೆ

ಬೀದರ್.ನ.13:ಇಲ್ಲಿಯ ಅಕ್ಕ ಮಹಾದೇವಿ ಮಹಿಳಾ ಕಾಲೇಜಿನಲ್ಲಿ ನಡೆದ ಎರಡು ದಿನಗಳ ಉಚಿತ ಆರೋಗ್ಯ ತಪಾಸಣೆ ಹಾಗೂ ರಕ್ತದಾನ ಶಿಬಿರದಲ್ಲಿ ವಿದ್ಯಾರ್ಥಿಗಳು, ಉಪನ್ಯಾಸಕರು ಹಾಗೂ ಸಿಬ್ಬಂದಿ ಸೇರಿ 300 ಜನರ ತಪಾಸಣೆ ಮಾಡಲಾಯಿತು.


ಅನೇಕರು ಸ್ವಯಂ ಪ್ರೇರಣೆಯಿಂದ ರಕ್ತದಾನ ಮಾಡಿದರು.

ಆರೋಗ್ಯ ಸಂಪತ್ತು ಎಲ್ಲಕ್ಕಿಂತಲೂ ಶ್ರೇಷ್ಠವಾದದ್ದು. ಹೀಗಾಗಿ ಎಲ್ಲರೂ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸಬೇಕು ಎಂದು ಸೋಮವಾರ ಶಿಬಿರದ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ವಿಜಯಶ್ರೀ ಹೆಲ್ತ್ ಕೇರ್ ಸೆಂಟರ್‌ನ ಡಾ. ಸಚಿನ್ ಪಾಟೀಲ ಸಲಹೆ ಮಾಡಿದರು.

ವಿದ್ಯಾರ್ಥಿಗಳು ಸದೃಢ ದೈಹಿಕ ಹಾಗೂ ಮಾನಸಿಕ ಆರೋಗ್ಯ ಕಾಯ್ದುಕೊಳ್ಳಬೇಕು. ನಿತ್ಯ ಪೌಷ್ಟಿಕ ಆಹಾರ ಸೇವಿಸಬೇಕು. ಉತ್ತಮ ಹವ್ಯಾಸಗಳನ್ನು ರೂಢಿಸಿಕೊಳ್ಳಬೇಕು ಎಂದು ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯೆ ಡಾ. ರಂಜನಾ ಪಾಟೀಲ ಕಿವಿಮಾತು ಹೇಳಿದರು.

ಕಾಲೇಜಿನ ಎನ್.ಎಸ್.ಎಸ್. ಅಧಿಕಾರಿ ಡಾ. ಮೀನಾ ಗಾಯಕವಾಡ್, ನ್ಯಾಕ್ ಅಧ್ಯಕ್ಷ ಡಾ. ಪ್ರವೀಣಕುಮಾರ, ಡಾ. ಗಂಗಾಂಬಿಕೆ ಪಾಟೀಲ, ಶಿಬಿರದ ಸಂಯೋಜಕ ವಿಶಾಲ್ ಅಪ್ಪೆ ಉಪಸ್ಥಿತರಿದ್ದರು.

ಕಾಲೇಜಿನ ಐ.ಕ್ಯೂ.ಎ.ಸಿ, ಎನ್.ಎಸ್.ಎಸ್. 'ಎ', 'ಬಿ' ಘಟಕ ಹಾಗೂ ವಿಜಯಶ್ರೀ ಹೆಲ್ತ್‌ಕೇರ್ ಸೆಂಟರ್ ಸಹಯೋಗದಲ್ಲಿ ಶಿಬಿರ ಹಮ್ಮಿಕೊಳ್ಳಲಾಗಿತ್ತು.



## ಅರುಣೋದಯ ಶಾಲೆಯಲ್ಲಿ ವಾರ್ಷಿಕ ಕ್ರೀಡಾಕೂಟಕ್ಕೆ ಚಾಲನೆ

# ದೈಹಿಕ ಆರೋಗ್ಯಕ್ಕೆ ಕ್ರೀಡೆ ಸಹಕಾರಿ



ಬೀದರ್.ನ.12:ಸದೃಢ ದೈಹಿಕ ಆರೋಗ್ಯ ಕಾಯ್ದುಕೊಳ್ಳಲು ಕ್ರೀಡೆಗಳು ಸಹಕಾರಿಯಾಗುತ್ತವೆ ಎಂದು ಶ್ರೀ ದತ್ತಗಿರಿ ಮಹಾರಾಜ ಕನ್ನಡ ಮಾಧ್ಯಮ ಪಬ್ಲಿಕ್ ಶಾಲೆಯ ಪ್ರಾಚಾರ್ಯೆ ಜಯದೇವಿ ಯದಲಾಪುರೆ ಹೇಳಿದರು.

ನಗರದ ಋಷಿಕೇಶ ಶಿಕ್ಷಣ ಸಂಸ್ಥೆಯ ಸಂಚಾಲಿತ ಅರುಣೋದಯ ಪ್ರಾಥಮಿಕ ಹಾಗೂ ಪ್ರೌಢಶಾಲೆಯಲ್ಲಿ ಬುಧವಾರ ನಡೆದ ಮೂರು ದಿನಗಳ ವಾರ್ಷಿಕ ಕ್ರೀಡಾಕೂಟದ ಉದ್ಘಾಟನಾ ಸಮಾರಂಭದಲ್ಲಿ ಅವರು ಮಾತನಾಡಿದರು.

ಕ್ರೀಡೆಗಳು ಶಿಸ್ತು ಕಲಿಸುತ್ತವೆ. ಕ್ರೀಡೆಗಳಲ್ಲಿ ಪಾಲ್ಗೊಳ್ಳುವುದರಿಂದ ಇಡೀ ದಿನ ಲವಲವಿಕೆಯಿಂದ ಇರಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಕರ್ನಾಟಕ ಲೇಖಕಿಯರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷೆ ಭಾರತಿ ವಸ್ತ್ರದ್ ಕ್ರೀಡಾಕೂಟಕ್ಕೆ ಚಾಲನೆ ನೀಡಿದರು. ಶಾಲೆಯ ಆಡಳಿತಾಧಿಕಾರಿ ಸಂತೋಷಕುಮಾರ ಮಂಗಳೂರೆ ಅಧ್ಯಕ್ಷತೆ ವಹಿಸಿದ್ದರು.

ಶ್ರೀಗುರು ಪಬ್ಲಿಕ್ ಶಾಲೆಯ ಕಾರ್ಯದರ್ಶಿ ಬಸವರಾಜೇಶ್ವರಿ, ಮಮತಾ ಮಂಗಳೂರೆ, ಅಲ್ಕಾವತಿ ಹೊಸದೊಡ್ಡೆ, ಸಂತೋಷ್ ಸೋಲಪುರೆ ಮತ್ತಿತರರು ಇದ್ದರು.ವಿದ್ಯಾರ್ಥಿಗಳಿಗೆ ಕೊಕ್ಕೋ,ಕಬಡ್ಡಿ, ವಾಲಿಬಾಲ್, ಕುರ್ಚಿ ಆಟ, ಬಲೂನ್ ಕುರ್ಚಿ ಆಟ, ಉದ್ದ ಜಿಗಿತ, ಎತ್ತರ ಜಿಗಿತ ಮತ್ತಿತರ ಸ್ಪರ್ಧೆಗಳು ನಡೆದವು.

## ಗಡಿ ಕನ್ನಡಿಗರ ಉತ್ಸವ-70ನೇ ಕನ್ನಡ ರಾಜ್ಯೋತ್ಸವದ ರಾಜ್ಯಮಟ್ಟದ ವಿಚಾರಸಂಕಿರಣದ ಪೂರ್ವ ಸಭೆ

ಬೀದರ.ನ.12:ವಿಶ್ವ ಕನ್ನಡಿಗರ ಸಂಸ್ಥೆ ಕರ್ನಾಟಕ ಹಾಗೂ ವೀರ ಕನ್ನಡಿಗರ ಸೇನೆ ಬೀದರ ಘಟಕದ ವತಿಯಿಂದ ಡಿಸೆಂಬರ್ 9 ರಂದು ನಡೆಯಲಿರುವ ಗಡಿ ಕನ್ನಡಿಗರ ಉತ್ಸವ ಹಾಗೂ 70ನೇ ಕನ್ನಡ ರಾಜ್ಯೋತ್ಸವ ರಾಜ್ಯಮಟ್ಟದ ವಿಚಾರ ಸಂಕಿರಣದ ಪೂರ್ವ ಸಭೆ ಶನಿವಾರ (ನ.15) ರಂದು ಮಧ್ಯಾಹ್ನ 1.30 ಗಂಟೆಗೆ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿರುವ ಅತಿಥಿ ಗೃಹದಲ್ಲಿ ನಡೆಯಲಿದೆ. ವೀರ ಕನ್ನಡಿಗರ ಸೇನೆ ಜಿಲ್ಲಾ ಉಪಾಧ್ಯಕ್ಷ ಬಸವರಾಜ ಜಡಗೆ ಅವರು ಪತ್ರಿಕಾ ಪ್ರಕಟಣೆಯಲ್ಲಿ ಈ ಕುರಿತು ಮಾಹಿತಿ ನೀಡಿದ್ದಾರೆ. ಸಭೆಯನ್ನು ವೀರ ಕನ್ನಡಿಗರ ಸೇನೆ ಜಿಲ್ಲಾಧ್ಯಕ್ಷ ಮುಕೇಶ್ ಶಾಹಗಂಜ್ ಅವರ ಅಧ್ಯಕ್ಷತೆಯಲ್ಲಿ ನಡೆಸಲಾಗುತ್ತದೆ. ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಅಂಬಾದಾಸ ಸೈನೆ ಮತ್ತು ಸಂದೀಪ ಚಾಂಬೋಳ ಅವರು ಸಭೆಯಲ್ಲಿ ಕಾರ್ಯಕ್ರಮದ ಕುರಿತು ವಿಷಯ ಪ್ರಸ್ತಾವನೆ ಮಂಡಿಸಲಿದ್ದಾರೆ.

ಜಿಲ್ಲೆಯ ಎಲ್ಲಾ ತಾಲ್ಲೂಕ ಪದಾಧಿಕಾರಿಗಳು ಸಭೆಯಲ್ಲಿ ಹಾಜರಾಗುವಂತೆ ಸೂಚಿಸಲಾಗಿದೆ.ಸಭೆಯಲ್ಲಿ ವೀರ ಕನ್ನಡಿಗರ ಸೇನೆ ರಾಜ್ಯ ಸಂಚಾಲಕ, ವಿಶ್ವ ಕನ್ನಡಿಗರ ಸಂಸ್ಥೆ ಅಧ್ಯಕ್ಷ ಡಾ. ಸುಬ್ಬಣ್ಣ ಕರಕನಳ್ಳಿ, ರಾಜ್ಯ ಸಂಘಟನಾ ಕಾರ್ಯದರ್ಶಿ ಚಂದ್ರಕಾಂತ ದೇವಕೆ ಹಾಗೂ ಇತರ ರಾಜ್ಯಮಟ್ಟದ ನಾಯಕರು ಭಾಗವಹಿಸಲಿದ್ದಾರೆ.

## ಶಿಕ್ಷಣದ ಅಭಿವೃದ್ಧಿ ಮೊದಲ ಆದ್ಯತೆ:ಶಾಸಕ ಪ್ರಭು ಚವ್ಹಾಣ

ಔರಾದ(ಬಿ).ನ.12:ಎಲ್ಲ ಕ್ಷೇತ್ರಗಳ ಅಭಿವೃದ್ಧಿಗೆ ಶಿಕ್ಷಣವೇ ಮೂಲ ಮಂತ್ರವಾಗಿದ್ದು, ಔರಾದ(ಬಿ) ವಿಧಾನ ಸಭಾ ಕ್ಷೇತ್ರದಲ್ಲಿ ಶಿಕ್ಷಣವನ್ನು ಮೊದಲ ಆದ್ಯತೆಯನ್ನಾಗಿಸಿಕೊಂಡು ಕೆಲಸ ಮಾಡುತ್ತಿದ್ದು, ಇದಕ್ಕಾಗಿ ಏನು ಬೇಕಾದರೂ ಮಾಡಲು ಸಿದ್ಧವೆಂದು ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ತಿಳಿಸಿದರು.

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಸರ್ಕಾರಿ ಪ್ರಥಮ ದರ್ಜೆ ಮಹಾವಿದ್ಯಾಲಯ ಔರಾದ (ಬಾ)ವತಿಯಿಂದ ನ.11ರಂದು ಸರ್ಕಾರಿ ಪ್ರಥಮ ದರ್ಜೆ ಮಹಾವಿದ್ಯಾಲಯದಲ್ಲಿ ಏರ್ಪಡಿಸಿದ್ದ 2025-26ನೇ ಸಾಲಿನ ಪ್ರಥಮ ವರ್ಷದ ವಿದ್ಯಾರ್ಥಿಗಳಿಗೆ ಸ್ವಾಗತ, ಎನ್‌ಎಸ್‌ಎಸ್,ಕ್ರೀಡಾ, ಸಾಂಸ್ಕೃತಿಕ ಹಾಗೂ ವಿವಿಧ ಸಮಿತಿಗಳ ಉದ್ಘಾಟನೆ ಹಾಗೂ ವಯೋನಿವೃತ್ತಿ ಹೊಂದಿದ ಶಿಕ್ಷಕರಿಗೆ ಸನ್ಮಾನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ನಾನು ಮೊದಲ ಬಾರಿ ಶಾಸಕನಾದ ಸಂದರ್ಭದಲ್ಲಿ ಕ್ಷೇತ್ರದಲ್ಲಿ ಮಾಡಬೇಕಿರುವ ಕೆಲಸಗಳ ಬಗ್ಗೆ ಯೋಜನೆಯನ್ನು ರೂಪಿಸಿಕೊಂಡಿದ್ದೆ. ಅದರಲ್ಲಿ ಶಿಕ್ಷಣ ಕ್ಷೇತ್ರವನ್ನು ಮೊದಲ ಆದ್ಯತೆಯನ್ನಾಗಿಸಿಕೊಂಡು ಅದಕ್ಕಾಗಿ ನಿರಂತರ ಶ್ರಮ ವಹಿಸುತ್ತಿದ್ದೇನೆ. ಅದರಂತೆ ಔರಾದ(ಬಿ) ಪಟ್ಟಣದಲ್ಲಿ ಶಾಲೆ-ಕಾಲೇಜುಗಳು, ಪಿಯುಸಿ, ಪದವಿ, ಪಾಲಿಟೆಕ್ನಿಕ್, ಐಟಿಐ ಕಾಲೇಜುಗಳನ್ನು ತಂದು ವಿದ್ಯಾಭ್ಯಾಸಕ್ಕೆ ಅನುಕೂಲಕರ ವಾತಾವರಣ ನಿರ್ಮಿಸಿದ್ದೇನೆ. ಇದೆಲ್ಲದರ ಫಲವಾಗಿ ಕ್ಷೇತ್ರದಲ್ಲಿ ಇಂದು ಶಿಕ್ಷಣ ಉತ್ತಮ ರೀತಿಯಲ್ಲಿದೆ ಎಂದು ಹೇಳಿದರು.

ಸರ್ಕಾರಿ ಪ್ರಥಮ ದರ್ಜೆ ಮಹಾವಿದ್ಯಾಲಯವನ್ನು ನಾನು ಪರಿಶ್ರಮ ವಹಿಸಿ ತಂದಿದ್ದೇನೆ. ಪ್ರಸ್ತುತ ಸುಮಾರು 600 ವಿದ್ಯಾರ್ಥಿಗಳು ದಾಖಲಾಗಿರುವುದನ್ನು ಕಂಡು ಸಂತೋಷವಾಗುತ್ತಿದೆ. ಎಲ್ಲ ತರಗತಿಗಳು ನಡೆಸಲು ಅನುಕೂಲವಾಗುವಂತೆ ಕಟ್ಟಡಗಳ ನಿರ್ಮಾಣ, ಕಂಪ್ಯೂಟರ್,ಕುರ್ಚಿ, ಬೆಂಚುಗಳು, ಡಿಜಿಟಲ್ ಕ್ಲಾಸ್ ರೂಮ್ ಹೀಗೆ ಎಲ್ಲ ಅವಶ್ಯಕ ಮೂಲ ಸೌಕರ್ಯಗಳನ್ನು ನಿರಂತರ ಒದಗಿಸುತ್ತಾ ಬಂದಿದ್ದೇನೆ.

ಈಗಾಗಲೇ 40 ಲಕ್ಷ ಅನುದಾನ ಮೀಸಲಿರಿಸಿದ್ದು, ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಇನ್ನೂ ಕೊಡಲು ಸಿದ್ಧನಿದ್ದೇನೆ ಎಂದು ತಿಳಿಸಿದರು.

ಬೋಧಕರು ಪಠ್ಯ ಚಟುವಟಿಕೆಗಳ ಜೊತೆಗೆ ಮಕ್ಕಳಿಗೆ ಉತ್ತಮ ಸಂಸ್ಕಾರ, ಕಲೆ ಮತ್ತು ಸಂಸ್ಕೃತಿಯ ಬಗ್ಗೆ ತಿಳಿಸಿಕೊಡಬೇಕು. ಕ್ರೀಡೆಗಳಲ್ಲಿ ತೊಡಗಿಸಿಕೊಳ್ಳಲು ಪ್ರೋತ್ಸಾಹಿಸಬೇಕು. ಇಲ್ಲಿ ಕಲಿತ ಮಕ್ಕಳು ಮುಂದಿನ ದಿನಗಳಲ್ಲಿ ಉನ್ನತ ಹುದ್ದೆಗಳನ್ನು ಅಲಂಕರಿಸಿ ಸಾಮಾಜಿಕ ಸೇವೆಯಲ್ಲಿ ತೊಡಗಿಸಿಕೊಳ್ಳುವ ರೀತಿಯಲ್ಲಿ ಬೋಧನೆ ಮಾಡಬೇಕು ಎಂದು ಹೇಳಿದರು.

ಅವ್ಯವಹಾರ- ತಪ್ಪಿತಸ್ಥರಿಗೆ ಶಿಕ್ಷೆಯಾಗಲಿ: ಈ ಹಿಂದೆ ಕೆಲಸ ಮಾಡಿದ್ದ ಪ್ರಾಂಶುಪಾಲರ ಮೇಲೆ ಸಾಕಷ್ಟು ದೂರುಗಳಿವೆ. ಅವರ ಅವಧಿಯಲ್ಲಿ ಒಂದೇ ಒಂದು ಕಾಲೇಜು ಅಭಿವೃದ್ಧಿ ಸಮಿತಿ ಸಭೆ ನಡೆಸಿಲ್ಲ.

ಸಮಿತಿಯ ಅನುಮತಿಯಿಲ್ಲದೇ ಹಣ ಬಳಕೆ ಮಾಡಿದ್ದಾರೆ. ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕ ದುರ್ಬಳಕೆ, ಗ್ರಂಥಾಲಯದ ಪುಸ್ತಕಗಳ ನಾಪತ್ತೆ, ಲ್ಯಾಪ್‌ಟಾಪ್, ಪ್ರಾಜೆಕ್ಟರ್‌ಗಳು ನಾಪತ್ತೆಯಾಗಿವೆ.ಹಣ ಬಳಕೆಯ ರೆಜಿಸ್ಟ್ರರ್‌ಗಳು ಸರಿಯಾಗಿ ನಿರ್ವಹಿಸಿಲ್ಲ. ಸುಮಾರು ಒಂದು ಕೋಟಿಯಷ್ಟು ಕಾಲೇಜು ಹಣ ದುರ್ಬಳಕೆ ಮಾಡಿಕೊಂಡಿದ್ದಾರೆ ಎನ್ನುವ ಹತ್ತು ಹಲವು ಆರೋಪಗಳು ಅವರ ಮೇಲಿವೆ.



# ಶ್ರೀಯಾನ್ ಕಿವುಡ-ಮೂಕ ಮಕ್ಕಳಿಗೆ ಶಿಕ್ಷಣ ಸಾಮಗ್ರಿ ವಿತರಣೆ



ಆಳಂದ: ನ.12:ಕಡಗಂಚಿ ಕಾರ್ಮೆಲ್ ಜ್ಯೋತಿ ಪಬ್ಲಿಕ್ ಚಾರಿಟೇಬಲ್ ಟ್ರಸ್ಟ್, ನ ಸಾಮಾಜಿಕ ಸೇವೆಯ ಭಾಗವಾಗಿ, ಟ್ರಸ್ಟ್ನ ವತಿಯಿಂದ ಕಲಬುರಗಿ ಜೆವರ್ಗಿ ಶೆಟ್ಟಿ ನಗರದಲ್ಲಿರುವ ಶ್ರೀಯಾನ್ ಕಿವುಡ ಮತ್ತು ಮೂಕ ಮಕ್ಕಳ ಆಶ್ರಮದ 64 ಮಕ್ಕಳಿಗೆ ದಿನನಿತ್ಯದ ಅಗತ್ಯ ವಸ್ತುಗಳು ಹಾಗೂ ಶಿಕ್ಷಣಕ್ಕೆ ಸಾಮಗ್ರಿಗಳನ್ನು ವಿತರಿಸಲಾಯಿತು.

ಈ ಕಾರ್ಯಕ್ರಮದಲ್ಲಿ ನೋಟ್‌ಪುಸ್ತಕಗಳು, ಪೆನ್ನುಗಳು, ಪೆನ್ಸಿಲ್‌ಗಳು, ಇರೇಝರ್‌ಗಳು,ಬ್ಯಾನ್‌ಡ್ ಪೆನ್ನುಗಳು, ಸಾಬುನುಗಳು, ಟೂತ್‌ಪೇಸ್ಟುಳು, ಬುರುಷ್‌ಗಳು ಸೇರಿದಂತೆ ವಿವಿಧ ವಸ್ತುಗಳನ್ನು ಮಕ್ಕಳಿಗೆ ಹಂಚಲಾಯಿತು.

ಟ್ರಸ್ಟ್ನ ಕಾರ್ಯದರ್ಶಿ ಫಾ. ವಿಲಿಯಂ ಮಿರಾಂಡಾ ಅವರು ಮಾತನಾಡಿ, ಹಿಂದುಳಿದ ಮತ್ತು ಅಲ್ಪಸಂಖ್ಯಾತ ವರ್ಗಗಳ ಜನರ ಸಹಾಯಕ್ಕಾಗಿ ಮಾನವೀಯ ಸೇವೆಯಲ್ಲಿ ತೊಡಗಿರುವ ಟ್ರಸ್ಟ್ ತನ್ನ ಧ್ಯೇಯವನ್ನು ಮುಂದುವರಿಸುತ್ತಿದೆ. ಶಾರೀರಿಕ ಅಸಮರ್ಥತೆಯಿಂದಾಗಿ ದಿನನಿತ್ಯದ ಸವಾಲುಗಳನ್ನು ಎದುರಿಸುತ್ತಿರುವ ಈ ಮಕ್ಕಳ ಅಗತ್ಯಗಳನ್ನು ಪೂರೈಸುವುದರ ಜೊತೆಗೆ,

ಅವರ ಶಿಕ್ಷಣಾಭಿವೃದ್ಧಿಗೆ ಉತ್ತೇಜನೆ ನೀಡುವುದು ಮತ್ತು ಗೌರವಯುತ ಜೀವನ ನಡೆಸುವಂತೆ ಸಹಾಯ ಮಾಡುವುದೇ ಈ ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಫಾ. ದೀಪಕ್ ಥಾಮಸ್, ಬ್ರ. ಫ್ಲೆಮಿಂಗ್, ಶ್ರೀ ರಾಜು ಮತ್ತು ಟ್ರಸ್ಟ್ನ ಸಿಬ್ಬಂದಿಗಳು ಉಪಸ್ಥಿತರಿದ್ದರು. ಅವರ ಹಾಜರಾತಿ ಮತ್ತು ಮಕ್ಕಳೊಂದಿಗಿನ ಸಂವಾದವು ಮಕ್ಕಳ ಮನಸ್ಸಿನಲ್ಲಿ ಸಂತೋಷ ಹಾಗೂ ಪ್ರೇರಣೆಯನ್ನು ಜಾಗೃತಗೊಳಿಸಿತು.

ಕಾರ್ಮೆಲ್ ಜ್ಯೋತಿ ಟ್ರಸ್ಟ್ ಈ ಮೂಲಕ ಸಮಾಜದಲ್ಲಿ ಕರುಣೆ ಮತ್ತು ಸಹಾಯದ ಸಂದೇಶವನ್ನು ಹರಡುತ್ತಿದ್ದು, ಇಂತಹ ಕಾರ್ಯಕ್ರಮಗಳು ಮುಂದಿನ ದಿನಗಳಲ್ಲೂ ಮುಂದುವರಿಯುವ ಸಾಧ್ಯತೆ ಇದೆ ಎಂದು ಟ್ರಸ್ಟ್ ಅಧಿಕಾರಿಗಳು ತಿಳಿಸಿದರು.

# ಕನ್ನಡ ನಮ್ಮ ಬದುಕಿನ ಬಾಷೆ, ಅನ್ನದ ಭಾಷೆ, ಹೃದಯದ ಭಾಷೆ:ಪ್ರಭು ಚನ್ನಬಸವ ಸ್ವಾಮೀಜಿ

ಅಥಣಿ.ನ.11:ರಾಜ್ಯದಲ್ಲಿ ಕನ್ನಡ ಭಾಷೆ, ಕಲೆ ಸಂಸ್ಕೃತಿಯನ್ನು ಉಳಿಸಿ ಬೆಳೆಸುವುದರ ಜೊತೆಗೆ ಕನ್ನಡಿಗರಿಗೆ ಅನ್ಯಾಯವಾದಾಗ ಗಡಿ ವಿಚಾರದಲ್ಲಿ ಬೀದಿಗಿಳಿದು ಹೋರಾಟ ಮಾಡುವ ಕರ್ನಾಟಕ ರಕ್ಷಣಾ ವೇದಿಕೆಯ ಕಾಯಕರ್ತರ ಕಾಯಕ ದೊಡ್ಡದು. ದೇಶದ ಗಡಿ ಕಾಯುವ ಸೈನಿಕರು ನಮ್ಮನ್ನು ಸಂರಕ್ಷಣೆ ಮಾಡಿದರೆ ನಾಡಿನಲ್ಲಿ ಕರವೇ ಸೇನಾನಿಗಳು ನಾಡಿನ ಭಾಷೆ ಮತ್ತು ಕನ್ನಡಿಗರ ಧ್ವನಿಯಾಗಿ ಕನ್ನಡಿಗರಿಗೆ ಅನ್ಯಾಯವಾದಾಗ ಮುಂಚೂಣಿಯಲ್ಲಿ ನಿಂತು ನ್ಯಾಯ ಒದಗಿಸುತ್ತಿದ್ದಾರೆ ಎಂದು ಮೋಟಗಿಮಠದ ಪ್ರಭು ಚನ್ನಬಸವ ಸ್ವಾಮೀಜಿ ಹೇಳಿದರು.

ಅವರು ಇಲ್ಲಿನ ಎಚ್ ಶಿವರಾಮೇಗೌಡ ಸಾರಥ್ಯದ

ಕರ್ನಾಟಕ ರಕ್ಷಣಾ ವೇದಿಕೆಯ ತಾಲೂಕಾ ಘಟಕದಿಂದ ಹಮ್ಮಿಕೊಳ್ಳಲಾಗಿದ್ದ ಗಡಿನಾಡು ಕನ್ನಡ ಉತ್ಸವ ಹಾಗೂ ಗಡಿನಾಡು ಕನ್ನಡ ರತ್ನ ಪ್ರಶಸ್ತಿ ಪ್ರದಾನ ಸಮಾರಂಭದ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದರು

ಕನ್ನಡ ಕೇವಲ ಒಂದು ಭಾಷೆಯಲ್ಲ, ಅದೊಂದು ಸಂಸ್ಕೃತಿ ಮತ್ತು ಪರಂಪರೆ ಯಾಗಿದೆ. ಸಾವಿರಾರು ವರ್ಷಗಳ ಸುದೀರ್ಘ ಇತಿಹಾಸ ಹೊಂದಿರುವ ಕನ್ನಡ ಭಾಷೆಯನ್ನು ಉಳಿಸಿ ಬೆಳೆಸುವುದು ಪ್ರತಿಯೊಬ್ಬ ಕನ್ನಡಿಗನ ಜವಾಬ್ದಾರಿಯಾಗಿದೆ. ಕನ್ನಡ ಭಾಷೆಗೆ ಎರಡು ಸಾವಿರ ವರ್ಷಗಳ ಸುದೀರ್ಘ ಇತಿಹಾಸ. ಪರಂಪರೆಯನ್ನ ಹೊಂದಿದೆ. ಇದು ಶ್ರೀಗಂಧದ ಬೀಡು, ಸಾಧು ಸಂತರು ದಾಸರು, ಶಿವಶರಣರು ಹಾಗೂ ಕವಿಗಳ, ಸಾಹಿತಿಗಳಿಂದ ಕಂಗೊಳಿಸುತ್ತಿರುವ ಸಮೃದ್ಧ ಕನ್ನಡ ನಾಡು. ಕನ್ನಡ ನಮ್ಮ ಬದುಕಿನ ಬಾಷೆ, ಅನ್ನದ ಭಾಷೆ, ಪವಿತ್ರ ಭಾಷೆ ಮತ್ತು ಹೃದಯದ ಭಾಷೆಯಾಗಿದೆ. ಈ ಭಾಷೆಯನ್ನ ಉಳಿಸಿ ಬೆಳೆಸಿ ಎನ್ನುವ ಪರಿಸ್ಥಿತಿ ಬರಬಾರದು. ಕೇವಲ ಉಳಿಸಿ ಉಳಿಸಿ ಎನ್ನುವ ಭಾಷಣಕ್ಕಿಂತ ಪ್ರತಿನಿತ್ಯ ಜೀವನದಲ್ಲಿ ಕನ್ನಡವನ್ನು ಬಳಸುವುದರಿಂದ ನಮ್ಮ ಮಾತೃಭಾಷೆಯನ್ನು ಗಟ್ಟಿಯಾಗಿ ಕಟ್ಟಲು ಸಾಧ್ಯ ಎಂದು ಹೇಳಿದರು.

ಕನ್ನಡ ರಾಜ್ಯೋತ್ಸವದ ಅಂಗವಾಗಿ ಕರವೇ ಘಟಕದಿಂದ ಎಲೆ ಮರಿ ಕಾಯಿಯಂತೆ ಸೇವೆ ಸಲ್ಲಿಸುವ ಕನ್ನಡ ಸೇವಕರನ್ನು ಗುರುತಿಸಿ ಗಡಿನಾಡು ಕನ್ನಡ ರತ್ನ ಪ್ರಶಸ್ತಿ ನೀಡಿ ಗೌರವಿಸುತ್ತಿರುವುದು ಒಳ್ಳೆಯ ಬೆಳವಣಿಗೆಯಾಗಿದೆ ಎಂದು ಪ್ರಸಂಶೆ ವ್ಯಕ್ತಪಡಿಸಿದರು.

ಸಮಾರಂಭವನ್ನು ಉದ್ಘಾಟಿಸಿದ ಉತ್ತರ ಕರ್ನಾಟಕ ಕರವೇ ಅಧ್ಯಕ್ಷ ಮಹಾಂತೇಶ ರಣಗಟ್ಟಿಮಠ ಮಾತನಾಡಿ ವಿವಿಧ ಪ್ರಾಂತಗಳಲ್ಲಿ ಹಂಚಿ ಹೋಗಿದ್ದ ಕನ್ನಡಿಗರನ್ನು ಒಗ್ಗೂಡಿಸಿ ಕರ್ನಾಟಕ ರಾಜ್ಯ ಅಸ್ತಿತ್ವಕ್ಕೆ ಬರಬೇಕಾದರೆ ಅನೇಕ ಕನ್ನಡ ಚಳುವಳಿ, ಏಕೀಕರಣದ ಹೋರಾಟದ ಫಲವನ್ನು ಸ್ಮರಿಸಬೇಕಾಗುತ್ತದೆ. ಅನೇಕ ಏಕೀಕರಣ ಹೋರಾಟಗಾರರ ತ್ಯಾಗದ ಫಲವಾಗಿ ನಮ್ಮ ಕನ್ನಡ ನಾಡು ಉದಯವಾಗಿದೆ. ಆದರೆ ಅನ್ಯ ಭಾಷೆಗಳ ಪ್ರಭಾವದಿಂದ ಕನ್ನಡಕ್ಕೆ ಕುತ್ತು ಬರುತಿದ್ದು, ಇದರಿಂದ ಕನ್ನಡಿಗರಿಗೆ ಮೇಲಿಂದ ಮೇಲೆ ಅನ್ಯಾಯವಾಗುತ್ತಿದೆ. ಆದ್ದರಿಂದಲೇ ಅನೇಕ ಕನ್ನಡಪರ ಸಂಘಟನೆಗಳು ಹುಟ್ಟಿಕೊಂಡಿವೆ. ಕಳೆದ 25 ವರ್ಷಗಳಿಂದ ಕರ್ನಾಟಕ ರಕ್ಷಣಾ ಕನ್ನಡಿಗರ ಹಿತ ಕಾಪಾಡುವ ನಿಟ್ಟಿನಲ್ಲಿ ಬೀದಿ ಗಿಳಿದು ಹೋರಾಟ ಮಾಡುತ್ತಾ ಬಂದಿದೆ.



# ಕೃಷ್ಣಾ ಸಹಕಾರಿ ಸಕ್ಕರೆ ಕಾರ್ಖಾನೆಯ ಅಧ್ಯಕ್ಷರಾಗಿ ಪರಪ್ಪ ಸವದಿ ಅವಿರೋಧ ಆಯ್ಕೆ



ಅಥಣಿ.ನ.12:ಸಹಕಾರ ತತ್ವದಡಿಯಲ್ಲಿ ಸ್ಥಾಪಿತವಾದ ಈ ಭಾಗದ ರೈತರ ಜೀವನಾಡಿಯಾಗಿರುವ ಕೃಷ್ಣಾ ಸಹಕಾರಿ ಸಕ್ಕರೆ ಕಾರ್ಖಾನೆ ರೈತರು ಕಟ್ಟಿ ಬೆಳೆಸಿದ ಕಾರ್ಖಾನೆಯಾಗಿದೆ. ಇಲ್ಲಿ ತೂಕದಲ್ಲಿ ಯಾವುದೇ ರೀತಿಯಲ್ಲಿ ಮೋಸ ಮಾಡದೇ. ರೈತರಿಗೆ ಯೋಗ್ಯ ದರ ನೀಡುತ್ತಲೇ ಬಂದಿದ್ದೇವೆ. ಇತ್ತೀಚಿಗೆ ರೈತರು ನಡೆಸಿದ ಹೋರಾಟದಿಂದ ಸರ್ಕಾರ ಘೋಷಿಸಿದ ಪ್ರತಿ ಟನ್ ಕಬ್ಬಿಗೆ 3300 ರೂ. ನೀಡುವುದರ ಜೊತೆಗೆ ಈ ಸಕ್ಕರೆ ಕಾರ್ಖಾನೆಯನ್ನು ಇನ್ನಷ್ಟು ಪ್ರಗತಿಯತ್ತ ಕೊಂಡೊಯ್ಯಲು ಪ್ರಾಮಾಣಿಕ ಪ್ರಯತ್ನ ಮಾಡುತ್ತೇವೆ ಎಂದು ಕಾರ್ಖಾನೆಯ ಅಧ್ಯಕ್ಷ ಪರಪ್ಪ ಸವದಿ ಹೇಳಿದರು.

ಅವರು ಸೋಮವಾರ ಕೃಷ್ಣಾ ಸಹಕಾರಿ ಸಕ್ಕರೆ ಕಾರ್ಖಾನೆಯ ಸಭಾಭವನದಲ್ಲಿ ನಡೆದ ನೂತನ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಆಯ್ಕೆ ಪ್ರಕ್ರಿಯೆಯಲ್ಲಿ ಕಾರ್ಖಾನೆಗೆ 5 ನೇ ಬಾರಿಗೆ ಅಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಗೊಂಡು ಅಭಿನಂದನಾ ಸನ್ಮಾನ ಸ್ವೀಕರಿಸಿ ಮಾತನಾಡಿದರು. ಇತ್ತೀಚಿಗೆ ನಡೆದ ಆಡಳಿತ ಮಂಡಳಿಯ ಚುನಾವಣೆಯಲ್ಲಿ ವಿರೋಧಿಗಳು ಏನೇ ಇಲ್ಲಸಲ್ಲದ ಆರೋಪಗಳನ್ನು ಮಾಡಿದರೂ ನಮ್ಮ ರೈತ ಸಹಕಾರಿ ಪೆನಲ್ ಅಭ್ಯರ್ಥಿಗಳಿಗೆ ರೈತರು ಹೆಚ್ಚಿನ ಮತಗಳನ್ನು ನೀಡುವ ಮೂಲಕ ಮತ್ತೆ ಆಯ್ಕೆ ಮಾಡಿದ್ದಾರೆ.ನಮ್ಮ ಪೆನಲ್ ಆಯ್ಕೆಗೆ ಶಾಸಕರಾದ ಲಕ್ಷ್ಮಣ ಸವದಿ ಹಾಗೂ ರಾಜು ಕಾಗೆ ಅವರ ಮಾರ್ಗದರ್ಶನದಲ್ಲಿ ಶ್ರಮಿಸಿದ ಎಲ್ಲಾ ರೈತ ಮುಖಂಡರಿಗೆ, ಚುನಾವಣೆಯಲ್ಲಿ ಮತಚಲಾಯಿಸಿದ ಎಲ್ಲಾ ರೈತ ಬಾಂಧವರಿಗೆ ಹೃತ್ಪೂರ್ವಕ ಕೃತಜ್ಞತೆಗಳನ್ನು ಸಲ್ಲಿಸುತ್ತೇವೆ. ಮುಂಬರುವ ದಿನಗಳಲ್ಲಿ ಇಬ್ಬರು ಶಾಸಕರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಅವರ ಮಾರ್ಗದರ್ಶನದಲ್ಲಿ ರೈತರ ಹಿತ ಕಾಪಾಡುವ ನಿಟ್ಟಿನಲ್ಲಿ ಆಡಳಿತ ಮಂಡಳಿಯ ಎಲ್ಲಾ ಸದಸ್ಯರು ಒಗ್ಗಟ್ಟಿನಿಂದ ಕಾರ್ಯ ನಿರ್ವಹಿಸುತ್ತೇವೆ. ನಷ್ಟದಲ್ಲಿರುವ ಈ ಕಾರ್ಖಾನೆಯನ್ನು ಪ್ರಗತಿಯತ್ತ ಕೊಂಡೊಯ್ಯಲು ಎಲ್ಲರೂ ಪ್ರಾಮಾಣಿಕ ಪ್ರಯತ್ನ ಮಾಡುತ್ತೇವೆ. ಪ್ರಸಕ್ತ ಹಂಗಾಮಿನಲ್ಲಿ 8 ಲಕ್ಷ ಮೆಟ್ರಿಕ್ ಟನ್ ಕಬ್ಬು ನುರಿಸುವ ಗುರಿ ಹೊಂದಿದ್ದೇವೆ. ರೈತರು ಹೆಚ್ಚಿನ ಪ್ರಮಾಣದಲ್ಲಿ ಒಳ್ಳೆಯ ಇಳುವರಿಯ ಕಬ್ಬನ್ನು ಕಳುಹಿಸಬೇಕೆಂದು ಮನವಿ ಮಾಡಿದರು.

ನೂತನ ಅಧ್ಯಕ್ಷ ಮತ್ತು ಉಪಾಧ್ಯಕ್ಷರಿಗೆ ಆಡಳಿತ ಮಂಡಳಿಯ ಸದಸ್ಯರು ಹಾಗೂ ಕಾರ್ಖಾನೆಯ ವಿಭಾಗೀಯ ಅಧಿಕಾರಿಗಳು ಸನ್ಮಾನಿಸಿ ಅಭಿನಂದಿಸಿದರು. ನಂತರ ಪ್ರಸಕ್ತ ಸಾಲಿನ ಕಬ್ಬು ನುರಿಸುವ ಹಂಗಾಮಿಗೆ ವಿಶೇಷ ಪೂಜೆ ಸಲ್ಲಿಸುವ ಮೂಲಕ ಚಾಲನೆ ನೀಡಲಾಯಿತು.ಈ ಸಂದರ್ಭದಲ್ಲಿ ಕಾರ್ಖಾನೆಯ ವ್ಯವಸ್ಥಾಪಕ ನಿರ್ದೇಶಕ ಜಿ ಎಂ ಪಾಟೀಲ, ಚುನಾವಣಾ ಅಧಿಕಾರಿ ರಾಘವೇಂದ್ರ ನೂಲಿ, ಮಲ್ಲೇಶ ಸವದಿ. ಶಿವಾನಂದ ಸವದಿ. ಕಾರ್ಖಾನೆಯ ಉಪಾಧ್ಯಕ್ಷ ಶಂಕರ ವಾಗ್ಮೋಡೆ. ನಿರ್ದೇಶಕರಾದ ಗುರುಬಸು ತೇವರಮನಿ, ಶಾಂತಿನಾಥ ನಂದೀಶ್ವರ, ಗೂಳಪ್ಪ ಜತ್ತಿ, ನಂದಾ ಕುಲಕರ್ಣಿ, ರಮೇಶ ಪಟ್ಟಣ, ಸೌರಭ ಪಾಟೀಲ, ಸುನಂದಾ ನಾಯಿಕ, ಸಿದರಾಯ ನಾಯಿಕ, ಮಲ್ಲಿಕಾರ್ಜುನ ಗೋಟಖಿಂಡಿ, ಹಣಮಂತ ಜಗದೇವ, ಪ್ರಲ್ಹಾದ ಪಾಟೀಲ, ವಿಶ್ವನಾಥ ಪಾಟೀಲ, ಜನರಲ್ ಮ್ಯಾನೇಜರ ಶಂಕರ ಗೋಟಖಿಂಡಿ, ಕಛೇರಿ ಅದಿಕ್ಷಕ ಸುರೇಶ ಠಕ್ಕಣ್ಣವರ, ಕಬ್ಬು ಅಭಿವೃದ್ಧಿ ಅಧಿಕಾರಿ ಹಣಮಂತ ಧರಿಗೌಡರ, ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಕಲ್ಯಾಣ ಕರ್ನಾಟಕದ ವಿದ್ಯಾರ್ಥಿಗಳು ಕಲಿಕೆಯಲ್ಲಿ ಹಿಂದುಳಿದಿಲ್ಲ ಆದರೆ ಸರಿಯಾದ ಮಾರ್ಗದರ್ಶನ ಅಗತ್ಯವಿದೆ:ನಮೋಶಿ

ಕಲಬುರ್ಗಿ:ನ.12:ಕಲ್ಯಾಣ ಕರ್ನಾಟಕ ಶೈಕ್ಷಣಿಕ ಕ್ಷೇತ್ರದಲ್ಲಿ ಹಿಂದುಳಿದ ಪ್ರದೇಶ ಎಂದು ಹಣೆಪಟ್ಟಿ ಕಟ್ಟಿಕೊಂಡಿದ್ದರು ಈ ಭಾಗದ ವಿದ್ಯಾರ್ಥಿಗಳು ಶೈಕ್ಷಣಿಕ ಚಟುವಟಿಕೆಗಳಲ್ಲಿ ಎಂದು ಹಿಂದೆ ಬಿದ್ದಿಲ್ಲ ಆದರೆ ಅವರಿಗೆ ಸರಿಯಾದ ಮಾರ್ಗದರ್ಶನ ಹಾಗೂ ಗುಣಮಟ್ಟದ ಶಿಕ್ಷಣದ ಕೊರತೆ ಇದೆ ಎಂದು ಹೈದರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆಯ ಅಧ್ಯಕ್ಷರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಶಶೀಲ್ ಜಿ ನಮೋಶಿ ಅಭಿಪ್ರಾಯ ಪಟ್ಟರು.

ಅವರು ಹೈದರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆಯ ಎಂ ಆರ್ ಎಂ ಸಿ ಸ್ಯಾಕ್ ಸಭಾಂಗಣದಲ್ಲಿ ನಡೆದ ಧಾರವಾಡದ ವಿದ್ಯಾ ಪಿ ಹಂಚಿನಮನಿ ಸಂಚಾಲಿತ ಎನ್ ಪಿ ಎಸ್ ಪದವಿಪೂರ್ವ ಕಾಲೇಜು ಕಲಬುರ್ಗಿಯಲ್ಲಿ ಪಿಯುಸಿ ದ್ವಿತೀಯ ವರ್ಷದಲ್ಲಿ ಗಮನಾರ್ಹ ಸಾಧನೆ ಮಾಡಿದ ವಿದ್ಯಾರ್ಥಿಗಳ ಅಭಿನಂದನಾ ಹಾಗೂ ಧಾರವಾಡದ ಪ್ರತಿಷ್ಠಿತ ಜ್ಞಾನದೀಪ ಕೋಚಿಂಗ್ ಸೆಂಟರ್ ಕಲಬುರ್ಗಿ ಶಾಖೆಯ ಉದ್ಘಾಟನಾ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡುತ್ತಿದ್ದರು.

ಕಲಬುರ್ಗಿಯಲ್ಲಿ ಗುಣಮಟ್ಟದ ಶಿಕ್ಷಣ ನೀಡಬೇಕೆಂಬ ಬಹುದಿನದ ಆಸೆ ನನ್ನದಾಗಿತ್ತು ಈ ದಿಸೆಯಲ್ಲಿ ನಾನು ರಾಜ್ಯದಲ್ಲಿ ಗುಣಮಟ್ಟದ ಶೈಕ್ಷಣಿಕ ಕ್ರಾಂತಿ ಮಾಡಿದ ಕೇವಲ ಮಹಾನಗರಗಳಲ್ಲಿ ಇರುವ ನ್ಯಾಷನಲ್ ಪಬ್ಲಿಕ್ ಸ್ಕೂಲ್ ಕಲಬುರ್ಗಿಯಲ್ಲಿ ಪ್ರಾರಂಭಿಸಬೇಕು ಎಂಬ ಛಲದಿಂದ ನಾನು ಹಾಗೂ ನನ್ನ ಸ್ನೇಹಿತರು ಕೂಡಿಕೊಂಡು ಪ್ರಯತ್ನಿಸಿ ಆ ಶಿಕ್ಷಣ ಸಂಸ್ಥೆ ಕಲಬುರ್ಗಿಯಲ್ಲಿ ಪ್ರಾರಂಭಿಸಿದೆವು. ಮಹಾನಗರಗಳಿಗೆ ಸೀಮಿತವಿಗಿದ್ದ ನ್ಯಾಷನಲ್ ಪಬ್ಲಿಕ್ ಸ್ಕೂಲ್ ಪ್ರಪ್ರಥಮ ಬಾರಿಗೆ ಅದು ಉತ್ತರ ಕರ್ನಾಟಕ ಭಾಗದಲ್ಲಿ ಕಲಬುರ್ಗಿಯಲ್ಲಿ ನಮ್ಮ ನೇತೃತ್ವದಲ್ಲಿ ಪ್ರಾರಂಭವಾಗಿ ನಮ್ಮ ಭಾಗದ ವಿದ್ಯಾರ್ಥಿಗಳಿಗೆ ಮಹಾನಗರಗಳಲ್ಲಿ ದೊರೆಯುವ ಶಿಕ್ಷಣ ದೊರೆಯುವ ಪ್ರಾಮಾಣಿಕ ಪ್ರಯತ್ನ ಮಾಡಲಾಯಿತು.

ವಿದ್ಯಾರ್ಥಿಗಳ ಜೀವನದಲ್ಲಿ ಪಿಯುಸಿ ಅತ್ಯಂತ ಮಹತ್ವವಾದ ಘಟ್ಟ ಅದಕ್ಕಾಗಿ ನಮ್ಮ ಭಾಗದ ವಿದ್ಯಾರ್ಥಿಗಳಿಗೆ ಅನುಕೂಲವಾಗಬೇಕಂಬ ಉದ್ದೇಶದಿಂದ ನಾನು ಹಾಗೂ ನಮ್ಮ ಎನ್ ಪಿ ಎಸ್ ತಂಡ ರಾಜ್ಯದ ಬೇರೆ ಬೇರೆ ಪಿಯುಸಿ ಕಾಲೇಜುಗಳನ್ನು ಸಂದರ್ಶಿಸಿದೆವು.

ಕೊನೆಗೆ ಕಿತ್ತೂರು ಕರ್ನಾಟಕದಲ್ಲಿ ಯಾರ್ಂಕ್ ಗಳ ಶಾಲೆ ಎಂದು ಮನೆಮಾತಾಗಿರುವ ವಿದ್ಯಾ ಪಿ ಹಂಚಿನಮನಿ ಪದವಿಪೂರ್ವ ಕಾಲೇಜು ನಮ್ಮ ಕಲ್ಯಾಣ ಕರ್ನಾಟಕ ಭಾಗದ ವಿದ್ಯಾರ್ಥಿಗಳ ಬಾಳಿಗೆ ಬೆಳಕು ನೀಡುವುದರಲ್ಲಿ ಸಂದೇಹವಿಲ್ಲ ಎಂದು ಮನಗಂಡು ನಮ್ಮ ತಂಡ ಪೊ??? ಪ್ರಹ್ಲಾದ್ ಹಂಚಿನಮನಿ ಸರ್ ಭೇಟಿ ಮಾಡಿ ನಮ್ಮ ಎನ್ ಪಿ ಎಸ್ ಸ್ಕೂಲ್ ಜೋತೆಗೂಡಿ 2022 ರಲ್ಲಿ ವಿದ್ಯಾ ಪಿ ಹಂಚಿನಮನಿ ಸಂಚಾಲಿತ ಎನ್ ಪಿ ಎಸ್ ಪದವಿಪೂರ್ವ ಕಾಲೇಜು ಪ್ರಾರಂಭಿಸಿದೇವು ಕೇವಲ 3 ವರ್ಷಗಳಲ್ಲಿ ಅನೇಕ ವಿದ್ಯಾರ್ಥಿಗಳು ವೈದ್ಯಕೀಯ ಹಾಗೂ ಎಂಜಿನಿಯರಿಂಗ್ ಸೀಟು ಸರಕಾರಿ ಕೋಟಾದಡಿ ಪಡೆದು ನಮ್ಮತಂಡದ ಕನಸನ್ನು ನನಸು ಮಾಡಿದ್ದಾರೆ. ಇಂದು ಸರ್ಕಾರಿ ಕೋಟಾದಡಿ ವೈದ್ಯಕೀಯ ಸೀಟು ತೆಗೆದುಕೊಂಡಿರುವ ಅನೇಕ ವಿದ್ಯಾರ್ಥಿಗಳಿನ್ನು ಇಂದು ಅಭಿನಂದಿಸಿರುವ ಈ ಕಾರ್ಯ ಸುತ್ತ್ಯಾರ್ಹ ಎಂದು ಹೇಳಿದರು.





## ಫೋಟೋಗ್ರಫಿಯ ಕೌಶಲ್ಯ ವಿದ್ಯಾರ್ಥಿನಿಯರು ಕಲಿಯುವುದು ಅವಶ್ಯಕ: ಕುಲಪತಿ ಪ್ರೊ. ವಿಜಯಾ ಕೋರಿಶೆಟ್ಟಿ



ವಿಜಯಪುರ,ನ.12: ಒಂದು ಚಿತ್ರ ಸಾವಿರ ಪದಗಳಿಗೆ ಸಮವಾಗಿದ್ದು, ಫೋಟೋಗ್ರಫಿಯ ಕೌಶಲ್ಯಗಳನ್ನು ವಿದ್ಯಾರ್ಥಿನಿಯರು ಕಲಿಯುವುದು ಅತೀ ಅವಶ್ಯಕ ಎಂದು ಮಹಿಳಾ ವಿವಿಯ ಕುಲಪತಿ ಪ್ರೊ, ವಿಜಯಾ ಕೋರಿಶೆಟ್ಟಿ ಹೇಳಿದರು.

ನಗರದ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ಅಧ್ಯಯನ ವಿಭಾಗ ಹಾಗೂ ಪ್ರಧಾನ ಮಂತ್ರಿ ಉಚ್ಚತರ ಶಿಕ್ಷಣ ಅಭಿಯಾನ, ಕೇಂದ್ರ ಸರ್ಕಾರದ ಉನ್ನತ ಶಿಕ್ಷಣ ಸಚಿವಾಲಯ ಮತ್ತು ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ಸಹಯೋಗದೊಂದಿಗೆ ಸೋಮವಾರ ಹಮ್ಮಿಕೊಂಡಿದ್ದ 'ಫೋಟೋಗ್ರಫಿ ಕೌಶಲ್ಯಗಳ' ಕುರಿತ ಒಂದು ದಿನದ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದರು.

ಫೋಟೋಗ್ರಫಿ ಕಲೆ, ವಿಜ್ಞಾನ ಮತ್ತು ತಂತ್ರಜ್ಞಾನಗಳ ಸಮ್ಮಿಶ್ರಣವಾಗಿದೆ. ಇತ್ತೀಚಿನ ದಿನಗಳಲ್ಲಿ ಎಲ್ಲಾ ಕ್ಷೇತ್ರಗಳಲ್ಲಿಯೂ ಫೋಟೋಗ್ರಫಿಗೆ ಮಹತ್ವ ಹೆಚ್ಚಾಗಿದ್ದು, ಫೋಟೋಗ್ರಫಿಯ ವಿಭಿನ್ನ ಕೌಶಲ್ಯಗಳನ್ನು ತಿಳಿದುಕೊಂಡು ಹೆಚ್ಚಿನ ಜ್ಞಾನವನ್ನು ಹೊಂದುವುದು ಅಗತ್ಯ. ಫೋಟೋಗ್ರಫಿ ತರಬೇತಿಯಿಂದ ಪಡೆದ ತಿಳುವಳಿಕೆಯನ್ನು ಬಳಸಿಕೊಂಡು ವಿದ್ಯಾರ್ಥಿನಿಯರು ಸಬಲೀಕರಣದತ್ತ ಮುಂದುವರಿಯಬೇಕು ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ವಿವಿಯ ಕುಲಸಚಿವ ಶಂಕರಗೌಡ ಸೋಮನಾಳ ಮಾತನಾಡಿ, ಇಂದಿನ ಯುವ ಪೀಳಿಗೆ ಫೋಟೋ ತೆಗೆಯುವ ಕ್ರೇಝ್‌ನಲ್ಲಿ ಅನೇಕ ಅನಾಹುತಗಳನ್ನು ಎದುರಿಸುತ್ತಿದೆ. ಆದರೆ ಇದೇ ಸಮಯದಲ್ಲಿ ಫೋಟೋಗ್ರಫಿ ಕ್ಷೇತ್ರದಲ್ಲಿ ವಿಶಾಲವಾದ ಉದ್ಯೋಗಾವಕಾಶಗಳು ಹೆಚ್ಚುತ್ತಿವೆ. ಡಿಜಿಟಲ್ ಯುಗದಲ್ಲಿ ಫೋಟೋಗ್ರಫಿ ಕೌಶಲ್ಯ ಕಲಿಯುವುದು ಅವಶ್ಯಕವಾಗಿದ್ದು, ವಿದ್ಯಾರ್ಥಿಗಳು ವಿವಿಧ ಕಲೆ ಮತ್ತು ಕೌಶಲ್ಯಗಳನ್ನು ಅಳವಡಿಸಿಕೊಂಡು ತಮ್ಮ ಭವಿಷ್ಯವನ್ನು ಕಟ್ಟಿಕೊಳ್ಳಬೇಕು ಎಂದರು.

ಕಾರ್ಯಾಗಾರದ ಅಧ್ಯಕ್ಷತೆ ವಹಿಸಿದ್ದ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ಮುಖ್ಯಸ್ಥ ಪ್ರೊ. ಓಂಕಾರ ಕಾಕಡೆ ಮಾತನಾಡಿ, ಪ್ರಸ್ತುತ ದಿನಗಳಲ್ಲಿ ಫೋಟೋಗ್ರಫಿ ಪ್ರತಿಯೊಬ್ಬರ ಜೀವನದಲ್ಲೂ ಪ್ರಮುಖ ಪಾತ್ರವಹಿಸುತ್ತಿದೆ. ವಿವಿಧ ಭಾವನೆಗಳನ್ನು ಅಚ್ಚುಕಟ್ಟಾಗಿ ಸೆರೆಹಿಡಿಯುವ ಸಾಮರ್ಥ್ಯ ಫೋಟೋಗೆ ಮಾತ್ರ ಸಿಗುತ್ತದೆ. ವಿದ್ಯಾರ್ಥಿನಿಯರು ವೈವಿಧ್ಯಮಯ ಫೋಟೋಗ್ರಫಿ ಕೌಶಲ್ಯಗಳನ್ನು ಕಲಿತು ತಮ್ಮ ಸಾಮರ್ಥ್ಯವನ್ನು ವೃದ್ಧಿಸಿಕೊಳ್ಳಬೇಕು ಎಂದು ಹೇಳಿದರು.

ಕಾರ್ಯಾಗಾರದಲ್ಲಿ 100 ಕ್ಕೂ ಅಧಿಕ ವಿವಿಧ ವಿಭಾಗದ ವಿದ್ಯಾರ್ಥಿನಿಯರು ಭಾಗವಹಿಸಿದ್ದರು. ಹಿರಿಯ ನೋಡಲ್ ಅಧಿಕಾರಿ ಪ್ರೊ. ಜಿ ಬಿ ಸೋನಾರ್, ವಿವಿಧ ವಿಭಾಗದ ವಿದ್ಯಾರ್ಥಿನಿಯರು, ಪ್ರಾಧ್ಯಾಪಕರು, ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ವರ್ಗದವರು ಮತ್ತಿತರಿದ್ದರು.ವಿಭಾಗದ ಕಾರ್ಯಾಗಾರದ ಸಂಯೋಜಕ ಹಾಗೂ ಸಹಾಯಕ ಪ್ರಾಧ್ಯಾಪಕ ಸಂದೀಪ ಪ್ರಾಸ್ತಾವಿಕ ನುಡಿಗಳನ್ನಾಡಿದರು, ಅತಿಥಿ ಉಪನ್ಯಾಸಕಿ ಸುಷ್ಮಾ ಪವಾರ ನಿರೂಪಿಸಿದರು. ಸಂಶೋಧನಾ ವಿದ್ಯಾರ್ಥಿನಿಯರಾದ ಜಯಶ್ರೀ ತಳವಾರ್ ಸ್ವಾಗತಿಸಿದರು, ಪವಿತ್ರಾ ಕಂಬಾರ ವಂದಿಸಿದರು.

## ಕನ್ನಡಕ್ಕೆ ಮಾಸ್ತಿಯವರು ಅಮೂಲ್ಯ ಆಸ್ತಿ

ಕಲಬುರಗಿ:ನ.12:ವಿಶ್ವದ ಪ್ರಮುಖ ಭಾಷೆಗಳಲ್ಲಿ ಸ್ಥಾನ ಪಡೆಯುವಲ್ಲಿ ಶ್ರಮಿಸಿದ, ಕನ್ನಡ ಭಾಷೆ ಸಾಹಿತ್ಯ, ಕಲೆ, ಸಂಸ್ಕೃತಿಗೆ ತಮ್ಮದೇ ಆದ ಅಮೂಲ್ಯವಾದ ಕೊಡುಗೆಯನ್ನು ನೀಡಿ, ಕನ್ನಡ ಸಾಹಿತ್ಯಕ್ಕೆ ಜ್ಞಾನಪೀಠ ಪ್ರಶಸ್ತಿ ದೊರಕಿಸಿಕೊಟ್ಟ ಮಾಸ್ತಿ ವೆಂಕಟೇಶ ಅಯ್ಯಂಗಾರ ಅವರು ಕನ್ನಡದ ಅಮೂಲ್ಯವಾದ ಆಸ್ತಿಯಾಗಿದ್ದಾರೆ ಎಂದು ಉಪನ್ಯಾಸಕ, ಲೇಖಕ ಎಚ್.ಬಿ.ಪಾಟೀಲ್ ಹೇಳಿದರು.

ನಗರದ ಶಹಾಬಜಾರ ಮಹಾದೇವ ನಗರದಲ್ಲಿನ 'ಸ್ವಾತಿ ಪ್ರೌಢಶಾಲೆ'ಯಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಜರುಗುತ್ತಿರುವ 'ಕನ್ನಡ ರಾಜ್ಯೋತ್ಸವ ಮಾಸಾಚರಣೆ ಸರಣಿ ಉಪನ್ಯಾಸ–10ರಲ್ಲಿ 'ಕನ್ನಡ ನಾಡು–ನುಡಿಗೆ ಮಾಸ್ತಿಯವರ ಕೊಡುಗೆ' ಎಂಬ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಅವರು ಮಾತನಾಡುತ್ತಿದ್ದರು.

ಮಾಸ್ತಿಯವರ 'ಕೆಲವು ಸಣ್ಣ ಕಥೆಗಳು' ಎಂಬ ಪ್ರಥಮ ಕೃತಿಯು 1920ರಲ್ಲಿ ಪ್ರಕಟವಾಯಿತು. ಇದು ಆಧುನಿಕ ಕನ್ನಡದ ಸಾಹಿತ್ಯದ ವಿಶಿಷ್ಟವಾದ ಮೊದಲ ಕೃತಿಯೆನಿಸಿದೆ. ಹಾಗೆ ನೋಡಿದರೆ ಸಣ್ಣಕಥೆಯನ್ನು ಮೊದಲು ಬರೆದವರು ಮಾಸ್ತಿಯವರಲ್ಲದೇ ಇದ್ದರೂ ಕೂಡಾ, ಕಥೆಗಳಿಗೆ ಮತ್ತು ಮಾಸ್ತಿಯವರಿಗೆ ಅನೋನ್ಯವಾದ ಬಾಂಧವ್ಯವಿದೆ.

ಆದ್ದರಿಂದಲೇ ಇವರು ಕನ್ನಡ ಕಥಾ ಸಾಹಿತ್ಯದ ಪ್ರಮುಖರೆನಿಸಿಕೊಂಡು, 'ಕನ್ನಡದ ಆಸ್ತಿ'ಯಾಗಿ ಜನಮಾನಸದಲ್ಲಿ ಅಚ್ಚಳಿಯದೇ ಉಳಿದಿದ್ದಾರೆ. ಮಾಸ್ತಿಯವರ ಸಣ್ಣ ಕಥೆಗಳ ಭಾಷೆ, ನಿರೂಪಣಾ ಶೈಲಿ, ಜೀವನದ ನಿಚ್ಚಳ ಅನುಭವಗಳು ತುಂಬಾ ಸರಳವಾಗಿದ್ದು, ಎಂತಹ ಓದುಗರನ್ನು ತನ್ನೊಳಗೆ ಆವರಿಸಿಕೊಳ್ಳುವಂತೆ ಮಾಸ್ತಿಯವರ ಸಾಹಿತ್ಯ ಹೊಂದಿದೆ ಎಂದರು.

ಮಾಸ್ತಿಯವರ ಕುರಿತು ಕುವೆಂಪು ಅವರು 'ಮಾಸ್ತಿಯವರ ಸಾಹಿತ್ಯ ದೊಡ್ಡದು. ಅವರು ಅದಕ್ಕಿಂತಲೂ ದೊಡ್ಡವರೆಂಬ ನನ್ನ ಭಾವನೆ' ಎಂದಿರುವ ಮಾತು ಮಾಸ್ತಿಯವರ ಮೇರು ವ್ಯಕ್ತಿತ್ವವನ್ನು ತೋರಿಸುತ್ತದೆ. ಕನ್ನಡ ಸಾಹಿತ್ಯ, ಭಾಷೆಗೆ ಮಾಸ್ತಿ ವೆಂಕಟೇಶ ಅಯ್ಯಂಗಾರ ಅವರು ನೀಡಿರುವ ಕೊಡುಗೆ ಬಹು ಮೌಲ್ಯಯುತವಾಗಿದೆ. ಅವರೊಬ್ಬ ಕನ್ನಡ ಸಾರಸತ್ವ ಲೋಕದ ಮೇರು ಸಾಹಿತಿಯಾಗಿದ್ದಾರೆ ಎಂದು ನುಡಿದರು.

ಕಾರ್ಯಕ್ರಮದಲ್ಲಿ ಕಸಾಪ ಉತ್ತರ ವಲಯದ ಗೌರವ ಅಧ್ಯಕ್ಷ ಶಿವಯೋಗೆಪ್ಪಾ ಎಸ್.ಬಿರಾದಾರ, ಸಂಸ್ಥೆಯ ಅಧ್ಯಕ್ಷ ಚನ್ನಬಸಪ್ಪ ಗಾರಂಪಳ್ಳಿ, ಮುಖ್ಯ ಶಿಕ್ಷಕಿ ಸಾಲಿ ಸಂಗೀತಾ ಹಾಗೂ ಶಾಲೆಯ ಶಿಕ್ಷಕಿಯರು, ವಿದ್ಯಾರ್ಥಿಗಳಿದ್ದರು.



## ಪ್ರಜೆಗಳ ಕೈಯಲ್ಲಿ ಅಧಿಕಾರವಿರುವದೇ ಪ್ರಜಾಪ್ರಭುತ್ವ



ಕಲಬುರಗಿ,ನ.12: ಸಮಾಜದ ಕಟ್ಟ ಕಡೆಯ ವ್ಯಕ್ತಿಗೂ ಎಲ್ಲರಂತೆ ಗೌರವಾದರಗಳಿಂದ ಕಾಣುವುದೇ ಪ್ರಜಾಪ್ರಭುತ್ವದ ನೈತಿಕತೆಯಾಗಿದೆ ಎಂದು ಕಲಬುರಗಿಯ ಕೇಂದ್ರೀಯ ವಿಶ್ವವಿದ್ಯಾಲಯದ ಪ್ರಾಧ್ಯಾಪಕ ಡಾ.ಕಿರಣ್ ಗಾಜನೂರು ಹೇಳಿದರು.

ಬಸವ ಸಮಿತಿಯು ಅನುಭವ ಮಂಟಪದಲ್ಲಿ ಅಂಬವ್ವ ರುದ್ರವಾಡಿ ಮತ್ತು ಶಾಂತಾಬಾಯಿ ಹಲವಾಯಿ ಸ್ಮರಣಾರ್ಥ ಜರುಗಿದ ಅರಿವಿನ ಮನೆ 875 ನೆಯ ದತ್ತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸಮಾಜದಲ್ಲಿ ಒಬ್ಬ ವ್ಯಕ್ತಿಯಾಗಿ ಬದುಕಬೇಕಾದರೆ ಅವನ ನಡೆನುಡಿ ನೈತಿಕತೆ ಹೇಗಿರಬೇಕೆಂಬುವುದು ಶರಣರು ನಡೆದು ನುಡಿದು ತೋರಿಸಿದ್ದಾರೆ ,ಆತ್ಮಾವಲೋಕನ ಮಾಡಿಕೊಂಡಿದ್ದಾರೆ .ಎನಗಿಂತ ಕಿರಿಯರಿಲ್ಲ ಶರಣರಿಗಿಂತ ಹಿರಿಯರಿಲ್ಲ ಎಂದು ಹೇಳಿ ಸಮಾಜದಲ್ಲಿ ವ್ಯಕ್ತಿಯ ಕಿಂಕರತ್ವದ ನೈತಿಕತೆ ಮೆರೆದಿದ್ದಾರೆ.ಮನೆ ನೋಡಾ ಬಡವರು ಮನ ನೋಡಾ ಘನ ಮಹಿಮರು ಎಂಬಲ್ಲಿ ಶರಣರು ವ್ಯಕ್ತಿಯ ಭೌತಿಕ ಶ್ರೀಮಂತಿಕೆಗಿಂತ ವ್ಯಕ್ತಿತ್ವದ ಶ್ರೀಮಂತಿಕೆಗೆ ಮಹತ್ವ ಕೊಟ್ಟಿದ್ದಾರೆ .ಏನಾದರೂ ಆಗು ಮೊದಲು ಸಮಾಜದಲ್ಲಿ ಮಾನವನಾಗಿ ಬದುಕು ಎಂದು ಶರಣರು ಹೇಳುತ್ತಾರೆ .ವ್ಯಕ್ತಿಯೊಬ್ಬ ಸಮಾಜದಲ್ಲಿ ನ್ಯಾಯನಿಷ್ಠುರಿ ಆಗಬೇಕು, ಹೊರತು ಸತ್ಯ ಹೇಳುವಲ್ಲಿ ಯಾವುದೇ ದಾಕ್ಷಿಣ್ಯ ಹಂಗು ಇರಬಾರದು ಆಗ ಮಾತ್ರ ಪ್ರಜಾಪ್ರಭುತ್ವದಲ್ಲಿ ಗಟ್ಟಿ ಧ್ವನಿಯಲ್ಲಿ ಅನ್ಯಾಯವನ್ನು ಪ್ರತಿಭಟಿಸಲು ಸಾಧ್ಯವಿದೆ ಎಂಬುದು ಅರಿಯಬೇಕು. ತನ್ನ ತಾನರಿದರೆ ನುಡಿಯಲ್ಲ ತತ್ವ ಸಿದ್ಧಾಂತ ,ತನ್ನನ್ನು ಮರೆತರೆ ನುಡಿಯಲ್ಲ ಅದು ಮಾಯೆಯಾಗಿ ಕಾಣಿಸುತ್ತದೆ . ಮನುಷ್ಯ ಕುಲ ಜಾತಿ ಛಲ ಮನಸೂತಕಗಳಿಂದ ಹೊರಬರಬೇಕು ಎಂದಿದ್ದಾರೆ .ಶರಣರು ಹೇಳುವಂತೆ ಆಸೆ ಎಂಬುದು ಭವದ ಬೀಜವಾಗಿದೆ ,ನಿರಾಶೆ ಎಂಬುದು ನಿತ್ಯ ಮುಕ್ತಿಯಾಗಿದೆ . ಪ್ರಸ್ತುತ ವರ್ತಮಾನ ಸಮಾಜದ ಪ್ರಜಾಪ್ರಭುತ್ವ ಎದುರಿಸುತ್ತಿರುವ ನೈತಿಕ ಸವಾಲುಗಳಿಗೆ ಶರಣರ ವಚನಗಳಲ್ಲಿ ಪರಿಹಾರವಿದೆ . ಪ್ರಜಾಪ್ರಭುತ್ವದಲ್ಲಿ ಹಣದ ಸಂಗ್ರಹದ ಸಂಘರ್ಷವು ದಾಸೋಹದಿಂದ ಪರಿಹಾರವಾಗುತ್ತದೆ .ಬಸವಣ್ಣನವರು ಮತ್ತು ಶರಣರ ಸಂದೇಶಗಳು ಜಾಗತಿಕ ಸಂವಿಧಾನವಾಗಿದೆ. ವರ್ತಮಾನ ಸುಧಾರಿಸಲು ಗತಕಾಲದ ಸಂಪೂರ್ಣ ಚಿಂತನೆಗಳಿಗೆ ಹೋಗುವುದಕ್ಕಿಂತ ಗತಕಾಲದ ನೈಜ ವೈಚಾರಿಕ ಜ್ಞಾನದ ಮೂಲವಾಗಿರುವ ವಚನಗಳಿಗೆ ಹೋಗುವುದು ಸೂಕ್ತವಾಗಿದೆ .ಇಂದಿನ ಕಾಲದ ರಾಜಕೀಯ, ಸಾಮಾಜಿಕ ಸಮಸ್ಯೆಗಳಿಗೆ ನೈತಿಕ ವಚನಗಳಲ್ಲಿ ಉತ್ತರವಿದೆ .ಅಂಬೇಡ್ಕರ್ ಅವರು ಹೇಳುವಂತೆ ಮೊದಲು ಸಮ ಸಮಾಜದ ನಿರ್ಮಾಣವಾಗಬೇಕು ಆಗ ಮಾತ್ರ ರಾಷ್ಟ್ರದ ಉನ್ನತಿಯಾಗುತ್ತದೆ. ವ್ಯಕ್ತಿಗಳ ನೈತಿಕತೆ ಬಲಿಷ್ಠ ವಾಗಿದ್ದರೆ ಬಲಿಷ್ಠ ರಾಷ್ಟ್ರ ಕಟ್ಟಲು ಸಾಧ್ಯವಿದೆ .12ನೇ ಶತಮಾನದಿಂದ 21ನೇ ಶತಮಾನದವರೆಗೆ ಸಾಮಾಜಿಕ ಸಮಸ್ಯೆಗಳು ಜೀವಂತವಾಗಿರುವುದರಿಂದ ಶರಣರ ವಚನಗಳು ಸಾವರ್ಕಾಲಿಕ ಸತ್ಯಗಳಾಗಿ , ಸಾಮಾಜಿಕ ಸಮಸ್ಯೆಗಳಿಗೆ ಪರಿಹಾರಗಳಾಗಿ ನಿಲ್ಲುತ್ತವೆ ಎಂದರು.ಕಾರ್ಯಕ್ರಮದಲ್ಲಿ ಕಲ್ಬುರ್ಗಿ ಬಸವ ಸಮಿತಿಯ ಅಧ್ಯಕ್ಷರಾದ ಡಾ. ವಿಲಾಸ್ವತಿ ಕೂಬಾ , ಉಪಾಧ್ಯಕ್ಷರಾದ ಡಾ.ಜಯಶ್ರೀ ದಂಡೆ , ಕಾರ್ಯದರ್ಶಿ ಡಾ. ಆನಂದ ಸಿದ್ಧಾಮಣಿ , ಡಾ.ಕೆ. ಎಸ್. ವಾಲಿ ,ಡಾ. ನೀಲಾಂಬಿಕ ಪೊಲೀಸ ಪಾಟೀಲ, ಶರಣಗೌಡ ಪಾಟೀಲ್ ಪಾಳ ,ಬಂಡಪ್ಪ ಕೇಸುರ್, ದತ್ತಿ ದಾಸೋಹಿಗಳಾದ ಡಾ. ಬಿ. ಎ. ರುದ್ರವಾಡಿ, ಡಾ. ಮಂಗಲಾ ರುದ್ರವಾಡಿ, ಡಾ. ಅಪರ್ಣ ನೀಲೇಗಾರ್, ಮಹೇಶ್ ನೀಲೇಗಾರ್ ಭಾಗವಹಿಸಿದರು.

## ಟನ್ ಕಬ್ಬಿಗೆ 3500 ರೂಪಾಯಿ ನಿಗದಿಪಡಿಸುವಂತೆ ಅಫಜಲಪುರ ಬಂದ್ ಗೆ ಭಾರಿ ಬೆಂಬಲ

ಅಫಜಲಪುರ.ನ.12: ಪಟ್ಟಣದಲ್ಲಿ ಸ್ವಾಭಿಮಾನಿ ಕಬ್ಬು ಬೆಳೆಗಾರರ ಸಂಘದಿಂದ ಕಳೆದ 6 ದಿನಗಳಿಂದ ನಡೆಯುತ್ತಿರುವ ಅನಿರ್ದಿಷ್ಟವಾಧಿ ಧರಣಿ ಸತ್ಯಾಗ್ರಹಕ್ಕೆ ಆಗಮಿಸಿ ಶಾಸಕ ಎಂ.ವೈ.ಪಾಟೀಲ್ ಮಾತನಾಡಿ,ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರಕಾರ ರಾಜ್ಯಾದ್ಯಾಂತ ಕಬ್ಬಿಗೆ ನಿಗದಿತ ಬೆಲೆ ನೀಡಿ ರೈತ ಪರ ಸರಕಾರ ಎಂಬುದು ಮತ್ತೊಮ್ಮೆ ಸಾಬೀತು ಪಡಿಸಿದ್ದೇವೆ.ಸರಕಾರ ನಿಗದಿಪಡಿಸಿದ ಬೆಲೆ ಒಪ್ಪಿಕೊಳ್ಳದ ಕಾರ್ಖಾನೆಗಳಿಗೆ ಕಬ್ಬು ನುರಿಸಲು ಅವಕಾಶ ನೀಡದೆ ಬಂದ್ ಮಾಡಲಾಗುತ್ತದೆ. ರೈತರು ಎದೆಗುಂದುವ ಅವಶ್ಯಕತೆಯಿಲ್ಲ ನಿಮ್ಮೊಂದಿಗೆ ನಾವಿದ್ದೇವೆ ಎಂದು ತಿಳಿಸಿದರು.ಮಾಜಿ ಸಚಿವ ಮಾಲಿಕಯ್ಯ ಗುತ್ತೇದಾರ ಮಾತನಾಡಿ, ರೈತರ ನಿರಂತರ ಹೋರಾಟಕ್ಕೆ ಸಂದ ಜಯವಾಗಿದೆ. ಕಾರ್ಖಾನೆಗಳು ಎಥನಾಲ್ ತೆಗೆಯುತ್ತಿರುವುದರಿಂದ 4 ಸಾವಿರ ಕೊಡಬೇಕು, ಆದರೆ ಸದ್ಯ 3,160 ರೂ.ಸಿಕ್ಕಿದೆ.ಬೆಲೆ ಒಪ್ಪಿಕೊಳ್ಳದ 3 ಕಾರ್ಖಾನೆಗಳಾದ ರೇಣುಕಾ,ಎನ್ಎಸ್ಎಲ್, ಉಗಾರ ಕಾರ್ಖಾನೆಗಳಿಗೆ 5 ದಿನ ಸಮಯ ಕೊಡುತ್ತೇವೆ, ಅಷ್ಟರೊಳಗಾಗಿ ಹೇಳಬೇಕು. ಸ್ಥಳೀಯ ಕಾರ್ಖಾನೆಗಳು ರೈತರು ಬೇರೆ ರಾಜ್ಯಕ್ಕೆ ಕಬ್ಬು ಕಳುಹಿಸುವಾಗ ಪೊ?ಲಿಸರಿಂದ ತಡೆಹಿಡಿದರೆ ನಾವು ಬಂದು ನಿಲ್ಲುತ್ತೇವೆ ನೊಡೋಣ ಎಂದು ತಿಳಿಸಿದರು.

ಸ್ವಾಭಿಮಾನಿ ಕಬ್ಬು ಬೆಳೆಗಾರರ ಸಂಘದ ಮುಖಂಡ ಶ್ರೀಮಂತ ಬಿರಾದಾರ ಮಾತನಾಡಿ,ಕಾರ್ಖಾನೆಗಳು ಇಳುವರಿಯಲ್ಲಿ ಮೋಸ ಮಾಡುತ್ತಿರುವುದದರಿಂದ ತಪಾಸಣಾ ಸಮಿತಿಯ 5 ಜನರಲ್ಲಿ ರೈತರನ್ನು ನೇಮಿಸಬೇಕು.20 ವರ್ಷಗಳಿಂದ ನಿರಂತರ ಮೋಸ ಮಾಡುತ್ತಿದ್ದಾರೆ, ಆದರೆ ಇನ್ಮುಂದೆ ನಾವೇ ಕಾರ್ಖಾನೆಗಳಿಗೆ ಬಂದು ಇಳುವರಿ ತೆಗಿದು ಕಮಿಷನರ್ ಕಚೇರಿಗೆ ಕೊಡ್ತೀವಿ ಇನ್ಮುಂದೆ ನಿಮ್ಮ ಮೋಸದ ಆಟ ನಡೆಯುವುದಿಲ್ಲ. ಪ್ರತಿ ಗ್ರಾಮಗಳಲ್ಲಿ ರೈತರನ್ನು ಸಂಘಟನೆ ಮಾಡಿ,ಜಾಗೃತಗೊಳಿಸುತ್ತೇವೆ.ಸಂಘದ ಹೆಸರಿನ ಮೇಲೆ ರೈತರಿಗೆ ಮೋಸ ಮಾಡುವ ಮುಖಂಡರಿಗೆ ಮೆಟ್ಟಿಲೆ ಹೊಡಿತಿವಿ.ರೇಣುಕಾ ಕಾರ್ಖಾನೆಯ ಇಳುವರಿ ಮೋಸದ ಬಗ್ಗೆ ಈಗಾಗಲೇ ತಕರಾರು ಅರ್ಜಿ ಸಲ್ಲಿಸಿದ್ದೇವೆ,ನಮಗೆ ತಿಳಿದ ನಿಜವಾದ ಇಳುವರಿ 11.60 ಇದೆ ಆದರೆ ತೋರಿಸುತ್ತಿಲ್ಲ ಎಂದು ಹೇಳಿದರು.

ಆಹಾರ ಇಲಾಖೆ ಉಪ ನಿರ್ದೇಶಕ ಭೀಮರಾಯ ಮಾತನಾಡಿ,ರಾಜ್ಯ ಸರಕಾರ ಜಿಲ್ಲೆಯ ಕಾರ್ಖಾನೆಗಳಾದ ಕೆಪಿಆರ್ 3160 ರೂ. ರೇಣುಕಾ 2976, ಸಿದ್ಧಸಿರಿ 3,168, ಎನ್ಎಸ್ಎಲ್ 3165 ಬಿಲ್ ನೀಡಲು ಆದೇಶಿಸಿದ್ದಾರೆ. ಕೆಪಿಆರ್, ಸಿದ್ದಸಿರಿ ಒಪ್ಪಿದ್ದಾರೆ, ಆದರೆ ಎನ್ಎಸ್ಎಲ್,ಉಗಾರ, ರೇಣುಕಾ ಆಡಳಿತ ಮಂಡಳಿಯವರು ಚರ್ಚಿಸಿ ನಿರ್ಧಾರ ತಿಳಿಸಲು 2 ದಿನ ಸಮಯ ಕೇಳಿದ್ದಾರೆ. ಪ್ರತಿ 15 ದಿನಗಳಿಗೊಮ್ಮೆ ಜಿಲ್ಲಾ ಮಟ್ಟದ ಅಧಿಕಾರಿಗಳಿಂದ ಇಳುವರಿ ತಪಾಸಣೆ ಮಾಡಲಾಗುತ್ತದೆ.










# ನಾಡು-ನುಡಿಗೆ ಡಾ.ಕೆ.ಶಿವರಾಮ ಕಾರಂತರ ಕೊಡುಗೆ ಅಪಾರ



ಕಲಬುರಗಿ:ನ.12: ಕಾದಂಬರಿಕಾರ, ಪರಿಸರವಾದಿ, ಪ್ರಗತಿಶೀಲ ಚಿಂತಕ, ಯಕ್ಷಗಾನ ತಜ್ಞ, ಸ್ವಾತಂತ್ರ್ಯ ಹೋರಾಟಗಾರ, ಚಿತ್ರ ನಿರ್ದೇಶಕ ಹೀಗೆ ಹತ್ತು ಹಲವು ಕ್ಷೇತ್ರಗಳ ಮೂಲಕ ಜ್ಞಾನಪೀಠ ಪ್ರಶಸ್ತಿ ಪುರಸ್ಕೃತ ಮೇರು ಸಾಹಿತಿ ಡಾ.ಕೆ.ಶಿವರಾಮ ಕಾರಂತ ಅವರು ನಾಡಿಗೆ ಅಪಾರವಾದ ಕೊಡುಗೆ ನೀಡಿದ್ದಾರೆ ಎಂದು ಉಪನ್ಯಾಸಕ, ಲೇಖಕ ಎಚ್.ಬಿ.ಪಾಟೀಲ್ ಅಭಿಪ್ರಾಯಪಟ್ಟರು.

ನಗರದ ಆಳಂದ ರಸ್ತೆಯ ಖಾದ್ರಿ ಚೌಕ್‌ನಲ್ಲಿ 'ಸಕ್ಸಸ್ ಕಂಪ್ಯೂಟರ ತರಬೇತಿ ಕೇಂದ್ರ'ದಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಜರುಗುತ್ತಿರುವ 'ಕನ್ನಡ ರಾಜ್ಯೋತ್ಸವ ಮಾಸಾಚರಣೆ ಸರಣಿ ಉಪನ್ಯಾಸ-9ರಲ್ಲಿ 'ಕನ್ನಡ ನಾಡು-ನುಡಿಗೆ ಕಾರಂತರ ಕೊಡುಗೆ' ವಿಶೇಷ ಉಪನ್ಯಾಸದಲ್ಲಿ ಅವರು ಮಾತನಾಡುತ್ತಿದ್ದರು.

ಕನ್ನಡ ಭಾಷೆ, ಸಾಹಿತ್ಯ, ಸಂಸ್ಕೃತಿ ಜಗತ್ತಿನ ಶ್ರೀಮಂತಿಕೆಯಲ್ಲಿ ಒಂದಾಗಲು ಶಿವರಾಮ ಕಾರಂತರ ಕೊಡುಗೆ ಅನನ್ಯವಾಗಿದೆ. 'ಮೂಕಜ್ಜಿಯ ಕನಸುಗಳು', 'ಮರಳಿ ಮಣ್ಣಿಗೆ' ಎಂಬ ಮೇರು ಕೃತಿಗಳು, 47 ಕಾದಂಬರಿಗಳು ಒಳಗೊಂಡಂತೆ ಒಟ್ಟು 417 ಗ್ರಂಥಗಳನ್ನು ರಚಿಸಿದ್ದಾರೆ. ತಮ್ಮ ಕಾದಂಬರಿಯಲ್ಲಿ ಸಮಾಜದ ಬಗ್ಗೆ ತಮ್ಮ ಕಳಕಳಿಯನ್ನು ಎತ್ತಿ ತೋರಿಸಿದ್ದಾರೆ. ಎಲ್ಲಾ ಜನರು ಓದುವ, ತಿಳಿಯುವ ಹಾಗೆ ಸರಳವಾದ ಭಾಷೆಯಲ್ಲಿ ಸಾಹಿತ್ಯ ರಚಿಸಿದ್ದು ಅವರ ವೈಶಿಷ್ಟ್ಯತೆಯಾಗಿದೆ. ಪ್ರಸಿದ್ಧ ಇತಿಹಾಸಕಾರರಾದ ರಾಮಚಂದ್ರ ಗುಹಾ ಅವರು ಹೇಳಿರುವಂತೆ, "ಸ್ವಾತಂತ್ರೋತ್ತರ ಭಾರತದ ರವೀಂದ್ರನಾಥ ಟ್ಯಾಗೋರ" ಎಂದು ಶಿವರಾಮ ಕಾರಂತರನ್ನು ವರ್ಣಿಸಿದ್ದು, ಕಾರಂತರ ಮೇರು ವ್ಯಕ್ತಿತ್ವಕ್ಕೆ ಸಾಕ್ಷಿಯಾಗಿದೆ ಎಂದು ಹೇಳಿದರು.

ಕಸಾಪ ಉತ್ತರ ವಲಯದ ಗೌರವ ಅಧ್ಯಕ್ಷ ಶಿವಯೋಗೆಪ್ಪಾ ಎಸ್.ಬಿರಾದಾರ ಮಾತನಾಡಿ, ಕಾರಂತರಿಗೆ 'ಕಡಲ ತೀರದ ಭಾರ್ಗವ' ಎಂಬ ಬಿರುದಾಂಕಿತವಿತ್ತು. ಬಾಲ್ಯದಿಂದಲೇ ದೇಶ ಸೇವೆ ಮಾಡಬೇಕು, ಸಮಾಜದ ಬಗ್ಗೆ ಸದಾ ಕಳಕಳಿ ತುಡಿಯುತ್ತಿತ್ತು. ಗಾಂಧಿಜೀಯವರ ಪ್ರಭಾವಕ್ಕೆ ಒಳಗಾಗಿ ಸ್ವಾತಂತ್ರ್ಯ ಹೋರಾಟದಲ್ಲಿ ಭಾಗವಹಿಸಿದರು. ದೇಶ ಸೇವೆಯ ಜೊತೆಯಲ್ಲಿ ಸಮಾಜಕ್ಕೆ ಬಹು ಉಪಯುಕ್ತವಾದ ಹಾಗೂ ಮೌಲಿಕವಾದ ಸಾಹಿತ್ಯ ಕೃಷಿ ಮಾಡಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಅಧ್ಯಕ್ಷ ಅಸ್ಲಾಂ ಶೇಖ್,ಶಿಕ್ಷಕಿಯರಾದ ಪೂಜಾ ಹೂಗಾರ, ಕಾವೇರಿ ಹೌದೆ, ಮುಸ್ಕಾನ್ ಶೇಖ್, ಸ್ನೇಹಾ ಚೌಹಾಣ ಹಾಗೂ ವಿದ್ಯಾರ್ಥಿಗಳಿದ್ದರು.

# ಕನ್ನಡವನ್ನು ಅಂತಾರಾಷ್ಟ್ರೀಯ ಮಟ್ಟಕ್ಕೇರಿಸಲು ಶ್ರಮಿಸಿದ ಗೋಕಾಕ್

ಕಲಬುರಗಿ:ನ.12:ಕವಿ, ಕಾದಂಬರಿಕಾರ, ವಾಗ್ಮಿ, ವಿಮರ್ಶಕ, ಶಿಕ್ಷಣ ತಜ್ಞ, ಪ್ರಾಂಶುಪಾಲ, ಉಪ ಕುಲಪತಿ,ಸಾಂಸ್ಕೃತಿಕ ರಾಯಭಾರಿ, ಕನ್ನಡಪರ ಚಳುವಳಿಗಾರರಾಗಿ ಹೀಗೆ ಹಲವು ವಿಧಗಳಲ್ಲಿ ಕನ್ನಡಕ್ಕಾಗಿ ಸೇವೆ ಸಲ್ಲಿಸಿ, ಕನ್ನಡವನ್ನು ಅಂತಾರಾಷ್ಟ್ರೀಯ ಮಟ್ಟಕ್ಕೇರಿಸಲು ಶ್ರಮಿಸಿದ ಡಾ.ವಿ.ಕೃ.ಗೋಕಾಕ್‌ರ ಕೊಡುಗೆ ಅಮೋಘವಾಗಿದೆ ಎಂದು ಉಪನ್ಯಾಸಕ, ಲೇಖಕ ಎಚ್.ಬಿ.ಪಾಟೀಲ ಅಭಿಮತಪಟ್ಟರು.

ನಗರದ ಡಬರಾಬಾದ ಕ್ರಾಸ್ ಸಮೀಪವಿರುವ ಅಲ್ಲಂಪ್ರಭು ನಗರದಲ್ಲಿರುವ 'ನೀಲಕಂಠೇಶ್ವರ ಶಾಲೆ'ಯಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಜರುಗುತ್ತಿರುವ ರಾಜ್ಯೋತ್ಸವ ಮಾಸಾಚರಣೆಯ ಸರಣಿ ಉಪನ್ಯಾಸ-11ರಲ್ಲಿ 'ಕನ್ನಡಕ್ಕೆ ಗೋಕಾಕರ ಕೊಡುಗೆ' ಎಂಬ ಉಪನ್ಯಾಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಆತನಾಡುತ್ತಿದ್ದರು.

'ವಿನಾಯಕ' ಎಂಬ ಕಾವ್ಯನಾಮದಿಂದ ಇವರನ್ನು ಗುರುತಿಸಲಾಗುತ್ತದೆ. ಗೋಕಾಕರ ಸಾಹಿತ್ಯ ಕೃಷಿಗೆ ಬೇಂದ್ರೆಯವರ ಮಾರ್ಗದರ್ಶನ, ಪ್ರೋತ್ಸಾಹ ದೊರೆತಿದೆ. ವಿವಿಧ ದೇಶಗಳಿಗೆ ಭಾರತದ ರಾಯಭಾರಿಯಾಗಿ ತೆರಳಿ ನಮ್ಮ ನಾಡು, ದೇಶದ ಕೀರ್ತಿಯನ್ನು ಹೆಚ್ಚಿಸಿದ್ದಾರೆ. ಕನ್ನಡಕ್ಕೆ ಐದನೇ ಜ್ಞಾನಪೀಠ ಪ್ರಶಸ್ತಿ ತಂದುಕೊಟ್ಟಿದ್ದಾರೆ 'ನವ್ಯ'ತೆಗೆ ಬುನಾದಿ ಹಾಕಿದ್ದಾರೆ. 'ಭಾರತ ಸಿಂಧು ರಶ್ಮಿ', 'ದ್ಯಾವಾ ಪ್ರಥ್ವಿ' ಸೇರಿದಂತೆ ಅನೇಕ ಕೃತಿಗಳನ್ನು ರಚಿಸಿದ್ದಾರೆ. ಅನೇಕ ಪ್ರಶಸ್ತಿಗಳನ್ನು ಪಡೆದಿರುವ ಗೋಕಾಕರು, ನಾಡು, ನುಡಿ, ಜಲ, ಭಾಷೆಗಾಗಿ ನಿರಂತರವಾಗಿ ಹೋರಾಟ ಮಾಡಿದ್ದಾರೆ. ಗೋಕಾಕರು ತಮ್ಮ ಪಾಂಡಿತ್ಯದಿಂದಾಗಿ ಜನಸಾಮಾನ್ಯರು ಕನ್ನಡ ಸಾಹಿತ್ಯವನ್ನು ಅಧ್ಯಯನ ಮಾಡಲು ಪ್ರೇರಣೆ ನೀಡಿದ್ದಾರೆ ಎಂದರು.

ಕನ್ನಡದ ಸಾರ್ವಭೌಮತೆಯ ಬಗ್ಗೆ ವರದಿ ಹೊಂದಿದ್ದ 'ಗೋಕಾಕ ವರದಿ' ಜಾರಿಗಾಗಿ ನಮ್ಮ ನಾಡಿನಲ್ಲಿ ಜರುಗಿದ ಕನ್ನಡ ಚಳುವಳಿ ಒಂದು ಐತಿಹಾಸಿಕ ದಾಖಲೆಯಾಗಿದೆ. ಏಕೆಂದರೆ ಕರ್ನಾಟಕದಲ್ಲಿ ಇಂತಹ ಬೃಹತ ಪ್ರಮಾಣದ ಚಳುವಳಿ ಹಿಂದೆಂದೂ ಜರಗಿರಲಿಲ್ಲ ಎಂದರು.ಕಾರ್ಯಕ್ರಮದಲ್ಲಿ ಕಸಾಪ ಉತ್ತರ ವಲಯದ ಗೌರವ ಅಧ್ಯಕ್ಷ ಶಿವಯೋಗೆಪ್ಪಾ ಎಸ್.ಬಿರಾದಾರ, ಚಿಂತಕ ಡಾ.ರಾಜಶೇಖರ ಪಾಟೀಲ್, ಸಮಾಜ ಸೇವಕ ಅಸ್ಲಾಂ ಶೇಖ್, ಶಾಲೆಯ ಮುಖ್ಯ ಶಿಕ್ಷಕಿ ಆಶಾರಾಣಿ ಮುಗಳಿ, ಶಿಕ್ಷಕಿಯರಾದ ರಾಜೇಶ್ವರಿ ಕಟ್ಟಿಮನಿ, ನಿರ್ಮಲಾ ಮಾಲಿಪಾಟೀಲ್, ನಿಂಗಮ್ಮ ದೊರೆ, ಸವಿತಾ ಬಿಸ್ಗೊಂಡ್, ರೇಣುಕಾ ಅದ್ವಾನಿ, ಐಶ್ವರ್ಯ ಬಇರಾದಾರ, ಅರ್ಚನಾ ಕಲಶೆಟ್ಟಿ ಹಾಗೂ ವಿದ್ಯಾರ್ಥಿಗಳು ಇದ್ದರು.



# ತೋಂಟದಾರ್ಯ ಸಂಸ್ಥೆಗೆ ಪ್ರಶಸ್ತಿ ಪಟ್ಟಣ್ ಶೆಟ್ಟರ್ ಹರ್ಷ

ಕಲಬುರಗಿ:ನ.12: ಶಿರೋಳದ ತೋಂಟದಾರ್ಯ ವಿದ್ಯಾಪೀಠದ ಮಾದಾರ ಚನ್ನಯ್ಯ ತರಬೇತಿ ಸಂಸ್ಥೆಯ ಸಾಧನೆ ಗುರುತಿಸಿ ಬೆಸ್ಟ್ ಪರಫಾಮಿರ್ಂಗ್ ಐಟಿಐ ಆಫ್ ಕರ್ನಾಟಕ ಪ್ರಶಸ್ತಿ ಲಭಿಸಿದ್ದು, ಬೆಂಗಳೂರಿನಲ್ಲಿ ಇತ್ತೀಚೆಗೆ ಪ್ರಶಸ್ತಿ ಪ್ರದಾನ ಮಾಡಲಾಯಿತು. ತರಬೇತಿ ಸಂಸ್ಥೆಯ ಕಾರ್ಯ ಸಾಧನೆ ಗುರುತಿಸಿ ರಾಜ್ಯ ಸರ್ಕಾರದ ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ, ಕರ್ನಾಟಕ ಕೌಶಲ್ಯ ಅಭಿವೃದ್ಧಿ ಪ್ರಾಧಿಕಾರದಿಂದ ಇತ್ತೀಚೆಗೆ ಬೆಂಗಳೂರಿನ ಲಲಿತ ಅಶೋಕ ಹೋಟೆಲ್‌ನಲ್ಲಿ ಆಯೋಜಿಸಿದ್ದ ಬೆಂಗಳೂರು ಕೌಶಲ್ಯ ಶೃಂಗಸಭೆ- 2025

ಸಮಾರಂಭದಲ್ಲಿ ಸಚಿವ ಶರಣಪ್ರಕಾಶ ಪಾಟೀಲ ಅವರು ಪುರಸ್ಕಾರ ನೀಡಿ ಗೌರವಿಸಿದರು. ಕಾರ್ಯಕ್ರಮದಲ್ಲಿ ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮದ ಅಧ್ಯಕ್ಷೆ ಶಿವಕಾಂತಮ್ಮ (ಕಾಂತಾ) ನಾಯಕ, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಆಯುಕ್ತರಾದ ಡಾ. ರಾಗಾಪ್ರಿಯ ಆರ್., ರಾಜ್ಯ ಸರ್ಕಾರದ ನಿವೃತ್ತ ಮುಖ್ಯ ಕಾರ್ಯದರ್ಶಿ ವಂದಿತಾ ಶರ್ಮಾ ಇದ್ದರು.



ಮಾದಾರ ಚನ್ನಯ್ಯ ಕೈಗಾರಿಕೆ ತರಬೇತಿ ಸಂಸ್ಥೆ ಎತ್ತರಕ್ಕೆ ಬೆಳೆಯಬೇಕೆಂದರೆ ಡಾ. ತೋಂಟದ ಸಿದ್ದಲಿಂಗ ಶ್ರೀಗಳು, ಗುರುಬಸವ ಶ್ರೀಗಳು, ತೋಂಟದಾರ್ಯ ಸಿದ್ದರಾಮ ಶ್ರೀಗಳು ಮತ್ತು ಸಿಬ್ಬಂದಿ, ಜನರ ಸಹಕಾರದಿಂದ ಪ್ರಶಸ್ತಿ ಬಂದಿದೆ ಎಂದು ಭೈರನಹಟ್ಟಿಯ ಶಾಂತಲಿಂಗ ಶ್ರೀಗಳು ಹೇಳಿದರು. ಜಗದ್ಗುರು ತೋಂಟದಾರ್ಯ ವಿದ್ಯಾಪೀಠದ ಕಾರ್ಯದರ್ಶಿಗಳು ಹಾಗೂ ಶ್ರೇಷ್ಠ ಶಿಕ್ಷಣ ತಜ್ಞರಾದ ಪ್ರೋಫೆಸರ್ ಎಸ್ ಎಸ್ ಪಟ್ಟಣ್ ಶೆಟ್ಟರ್ ಮಾದರ ಚೆನ್ನಯ್ಯ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರಿಗೆ, ಸಿಬ್ಬಂದಿ ವರ್ಗದವರಿಗೆ ಗೌರವಿಸಿ ಹರ್ಷ ವ್ಯಕ್ತಪಡಿಸಿದರು. ಸಂಸ್ಥೆಯ ಪ್ರಾಚಾರ್ಯ ಬಸವರಾಜ ಸಾಲಿಮಠ ಮಾತನಾಡಿ ತೋಂಟದ ಸಿದ್ಧಲಿಂಗ ಸ್ವಾಮೀಜಿಯವರು ಗ್ರಾಮೀಣ ಭಾಗದ ನಿರುದ್ಯೋಗಿ ಯುವಕ- ಯುವತಿಯರಿಗೆ ಉದ್ಯೋಗಾಧಾರಿತ ಶಿಕ್ಷಣ ಪಡೆದು ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ಐಟಿಐ ಸಂಸ್ಥೆಗಳಿಂದ ಮಾತ್ರ ಎಂದು ಅರಿತಿದ್ದರು. ಅದನ್ನು ಕಾರ್ಯಗತಗೊಳಿಸುವ ಸಲುವಾಗಿ ಜಗದ್ಗುರು ತೋಂಟದಾರ್ಯ ವಿದ್ಯಾಪೀಠವನ್ನು ಸ್ಥಾಪಿಸಿದರು.

ಆ ಮೂಲಕ ಕರ್ನಾಟಕದ ಗ್ರಾಮೀಣ ಪ್ರದೇಶ ಮಂಡಲಗಿರಿ,ಡಂಬಳ, ಮೋರಟಗಿ, ಗದಗ ಹಾಗೂ ಶಿರೋಳ ಸೇರಿ ಒಟ್ಟು 5 ಐಟಿಐಗಳನ್ನು 1983- 84ರಲ್ಲಿ ಪ್ರಾರಂಭಿಸಿದರು.1984ರಲ್ಲಿ ನೀಲಕಂಠಜೀ ಗಣಾಚಾರಿಯವರ ಸರ್ವೋದಯ ಕಾರ್ಯಕರ್ತರ ಸಹಕಾರದಿಂದ ಅಂದಿನ ಶಾಸಕ ಬಿ.ಆರ್. ಯಾವಗಲ್ಲ ಅವರಿಂದ ಮಾದಾರ ಚನ್ನಯ್ಯ ಕೈಗಾರಿಕಾ ತರಬೇತಿ ಕೇಂದ್ರ ಎಂಬ ಹೆಸರಿನಿಂದ ಶಿರೋಳದಲ್ಲಿ ಉದ್ಘಾಟಿಸಲಾಯಿತು.1984ರಲ್ಲಿ ಐಟಿಐ ಎಲೆಕ್ಟ್ರಿಷಿಯನ್ ವೃತ್ತಿಯ ಎರಡು ಘಟಕಗಳ 19 ವಿದ್ಯಾರ್ಥಿಗಳಿಂದ ಪ್ರಾರಂಭಿಸಿ, ವರ್ಷದಿಂದ ವರ್ಷಕ್ಕೆ ಉದ್ಯೋಗಿಗಳನ್ನು ಸೃಷ್ಟಿ ಮಾಡುವ ಸಂಸ್ಥೆಯಾಗಿ ಬೆಳೆಯತೊಡಗಿತು. 1994ರಲ್ಲಿ ಡೀಸೆಲ್ ಮೆಕ್ಯಾನಿಕ್ ಎಂಬ ಮತ್ತೊಂದು ವೃತ್ತಿಯ ಘಟಕವನ್ನು ಪ್ರಾರಂಭಿಸಲಾಯಿತು. ಪ್ರತಿವರ್ಷ 38 ವಿದ್ಯಾರ್ಥಿಗಳಿಗೆ ತರಬೇತಿ ನೀಡಲು ಪ್ರಾರಂಭಿಸಿತು.

ಪ್ರಾರಂಭದಲ್ಲಿ 1 ವೃತ್ತಿಯ 1 ಘಟಕದ 19 ತರಬೇತುದಾರರ ಸಂಸ್ಥೆ ಇಂದು 4 ವೃತ್ತಿಯ 8 ಘಟಕಗಳಲ್ಲಿ 164 ತರಬೇತುದಾರರ ತರಬೇತಿ ಸಾಮರ್ಥ ಹೊಂದಿದೆ.

# ಮೌನೇಶ್ವರ ವಚನಗಳಲ್ಲಿ ವಿಶ್ವಧರ್ಮದ ಸಾರ:ಡಾ.ಎಸ್.ಎಂ.ಹಿರೇಮಠ

ಆಳಂದ:ನ.12:ವಚನ ಸಾಹಿತ್ಯವು ಸರ್ವಕಾಲಿಕ ಸತ್ಯಗಳ ಅನುಭವಗಳನ್ನು ತಿಳಿಸುವ ಮಹಾನ್ ಗ್ರಂಥಗಳಾಗಿದ್ದು,ವಿಶೇಷವಾಗಿ ಶ್ರೀ ಮೌನೇಶ್ವರರ ವಚನಗಳಲ್ಲಿ ವಿಶ್ವಧರ್ಮಗಳ ಸಾರವೇ ಅಡಗಿದ್ದು, ಅದು ಎಲ್ಲರಿಗೂ ಸಾರ್ವತ್ರಿಕ ಸಂದೇಶವನ್ನು ನೀಡುತ್ತದೆ ಎಂದು ಗುಲ್ಬರ್ಗ ವಿಶ್ವವಿದ್ಯಾಲಯದ ನಿವೃತ್ತ ಪ್ರಾಧ್ಯಾಪಕ ಡಾ. ಎಸ್.ಎಂ. ಹಿರೇಮಠ ಅವರು ಅಭಿಪ್ರಾಯಪಟ್ಟರು.

ಪಟ್ಟಣದ ಶ್ರೀ ಸಿದ್ದಲಿಂಗ ಶಿವಾಚಾರ್ಯ ಹಿರೇಮಠ ಶಾಲಾ ಆವರಣದಲ್ಲಿ ನಡೆದ ಪೀಠಾಧಿಪತಿ ಶ್ರೀ ಸಿದ್ದೇಶ್ವರ ಶಿವಾಚಾರ್ಯರ 11ನೇ ವರ್ಷದ ಪಟ್ಟಾಧಿಕಾರದ ಸ್ಮರಣಾರ್ಥವಾಗಿ ಆಯೋಜಿಸಲ್ಪಟ್ಟ ಧರ್ಮ ಚಿಂತನ ಗೋಷ್ಠಿ ಹಾಗೂ ಶ್ರೀ ಮೌನೇಶ್ವರ ವಚನಗಳ ಚಿಂತನ-ಮಂಥನ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

"ವಚನಗಳು ಕೇವಲ ಧಾರ್ಮಿಕ ಗ್ರಂಥಗಳಲ್ಲ, ಅವು ಜೀವನದ ಆಳವಾದ ಅನುಭವಗಳ ಸಂಗ್ರಹ. ಮೌನೇಶ್ವರರ ವಚನಗಳು ಇಸ್ಲಾಂ, ಕ್ರಿಶ್ಚಿಯನ್, ಬೌದ್ಧ, ಹಿಂದೂ ಎಂಬ ಧರ್ಮಗಳ ಮಧ್ಯೆ ಸಾಮ್ಯತೆಯನ್ನು ತೋರಿಸುತ್ತವೆ. ಇದು ಇಂದಿನ ವಿಶ್ವಕ್ಕೆ ಶಾಂತಿ ಮತ್ತು ಸಾಮರಸ್ಯದ ಸಂದೇಶವಾಗಿದೆ" ಎಂದು ವಿವರಿಸಿದರು.

ವಚನ ಸಾಹಿತ್ಯದ ಮಹತ್ವವನ್ನು ಉದಾಹರಣೆಗಳೊಂದಿಗೆ ವಿವರಿಸುತ್ತಾ, ಅದು ಆಧುನಿಕ ಸಮಸ್ಯೆಗಳಾದ ಧಾರ್ಮಿಕ ಅಸಹಿಷ್ಣುತೆ ಮತ್ತು ಸಾಮಾಜಿಕ ವಿಭಜನೆಗಳಿಗೆ ಪರಿಹಾರವೆಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಪದವಿಪೂರ್ವ ಶಿಕ್ಷಣ ಇಲಾಖೆಯ ನಿವೃತ್ತ ಜಂಟಿ ನಿರ್ದೇಶಕ ಶಿವಶರಣಪ್ಪ ಮೂಳೆಗಾಂವ ಅವರು ಮಾತನಾಡಿ, ಶ್ರೀ ಹಿರೇಮಠದ ಪುರಾತನ ಇತಿಹಾಸವನ್ನು ಉಲ್ಲೇಖಿಸಿ, "ಈ ಮಠವು ಕರ್ನಾಟಕದ ಧಾರ್ಮಿಕ ಪರಂಪರೆಯ ಸಂಕೇತ. ಇಲ್ಲಿನ ಶಿಕ್ಷಣವು ಧಾರ್ಮಿಕ ಮೌಲ್ಯಗಳೊಂದಿಗೆ ಸಂಯೋಜಿಸಲ್ಪಟ್ಟಿರುವುದು ಶ್ಲಾಘನೀಯ. ಇದು ಎಲ್ಲರಿಗೂ ಲಭ್ಯವಾಗುವಂತೆ ಮಾಡುವುದು ನಮ್ಮ ಜವಾಬ್ದಾರಿ" ಎಂದು ಆಶಿಸಿದರು. ಶಿಕ್ಷಣದಲ್ಲಿ ಧರ್ಮದ ಸ್ಥಾನ ಮತ್ತು ಆಧುನಿಕತೆಯ ಸಂತುಲನದ ಬಗ್ಗೆ ಚರ್ಚಿಸಿ, ಯುವಕರಿಗೆ ವಚನಗಳ ಮೂಲಕ ನೈತಿಕ ಮೌಲ್ಯಗಳನ್ನು ಒಡ್ಡುವುದರ ಮಹತ್ವವನ್ನು ಒತ್ತಿ ಹೇಳಿದರು.

ಸಂಬುದ್ಧ ಅಧ್ಯಯನ ಸಂಸ್ಥೆಯ ಸಂಯೋಜನಾಧಿಕಾರಿ ಡಾ. ಮೋನಪ್ಪ ಎಲ್. ಸುತಾರ ಅವರು ಮೌನೇಶ್ವರ ವಚನಗಳ ಕುರಿತು ವಿಶೇಷ ಉಪನ್ಯಾಸ ನೀಡಿದರು. "ಮೌನೇಶ್ವರರ ವಚನಗಳು ಮೌನದ ಶಕ್ತಿಯನ್ನು ತಿಳಿಸುತ್ತವೆ. ಅದು ಧರ್ಮದ ಆಳವಾದ ಚಿಂತನೆಗೆ ಕಾರಣವಾಗುತ್ತದೆ ಎಂದು ಅವರು ಹೇಳಿದರು. ಉಪನ್ಯಾಸದಲ್ಲಿ ವಚನಗಳ ಭಾಷಾ ಸೌಂದರ್ಯ, ತಾತ್ವಿಕ ಆಳ ಮತ್ತು ಸಾಮಾಜಿಕ ಸಂದೇಶಗಳನ್ನು ವಿವರಿಸಿ, ಶ್ರೋತೃಗಳನ್ನು ಮಂಥನಕ್ಕೆ ಒಳಪಡಿಸಿದರು.

ಈ ಸಂದರ್ಭದಲ್ಲಿ ಅಖಿಲ ಕರ್ನಾಟಕ ವಿಶ್ವಕರ್ಮ ಮಹಾಸಭಾ ತಾಲೂಕು ಘಟಕದ ವತಿಯಿಂದ ಶ್ರೀಗಳಿಗೆ ಪುಷಾ??ರ್ಚನೆ ಮತ್ತು ಗುರುವಂದನೆ ಸಲ್ಲಿಸಲಾಯಿತು. ಕಾರ್ಯಕ್ರಮದಲ್ಲಿ ಮಲ್ಲಿನಾಥ ಯಲಶೆಟ್ಟಿ, ಡಿ.ಎಂ. ಪಾಟೀಲ, ಅಪ್ಪಾಸಾಹೇಬ ತೀರ್ಥೆ, ಬಸವರಾಜ ವಿಶ್ವಕರ್ಮ, ಶಿವಲಿಂಗ ಮಂಟಗಿ, ವೀರಯ್ಯ ಸ್ವಾಮಿ, ಕಾಳಿಕಾದೇವಿ ಟ್ರಸ್ಟ್ ಅಧ್ಯಕ್ಷ ಮಹಾದೇವ ಕೆ. ಪೋದ್ದಾರ, ದೇವಿಂದ್ರಪ್ಪ ಮಾಸ್ಟರ್, ಮನೋಹರ ಪೋದ್ದಾರ, ಮೌನೇಶ್ವರ ಟ್ರಸ್ಟ್ ಕಮೀಟಿ ಅಧ್ಯಕ್ಷರು ಸೇರಿದಂತೆ ಸಾರ್ವಜನಿಕರು ಉಪಸ್ಥಿತರಿದ್ದರು.






Owner, Editor, Printerd,and published, :-Owner - sidramayya swamy devi colony bidar - 585401, Editor-sidramayya swamy devi colony bidar, Printed at Sri sai offset printer's H.NO : 8-9-416/1 devi colony bidar - 585401 Published at H.NO:8-9-416/1 devi colony Bidar - 585401